

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ



ಜಾಹೀರಾತಿಗಾಗಿ ಸಂಪರ್ಕಿಸಿ 9663122276 www.munjanevarthe.com



VOLUME : 2 ISSUE: 131 ಸಂಪುಟ: 02 ಸಂಚಿಕೆ: 131 ಪುಟಗಳು: 04 munjanevarthe 25 TUESDAY JUNE 2024 25 ಮಂಗಳವಾರ ಜೂನ್ 2024 ₹ 2



ಮತ್ತೊಂದು ಪ್ರಕರಣ ಸಿಐಡಿಗೆ ವಹಿಸಿದ ಸರ್ಕಾರ — ವಿವರಪುಟ 02

ಭಾರತೀಯ ಸಂಸ್ಕೃತಿಯಲ್ಲಿ ಅಕ್ಷರಾಭ್ಯಾಸ ಗುರುಕುಲದ ಪದ್ಧತಿ — ವಿವರಪುಟ 03

ವಿಧಾನ ಪರಿಷತ್ತಿನ ಒಂದು ಸ್ಥಾನಕ್ಕೆ ಚುನಾವಣೆ; ನಾಮಪತ್ರ ಸಲ್ಲಿಕೆ ಮಂಗಳವಾರದಿಂದ ಆರಂಭ — ವಿವರಪುಟ 04


# 17 ಮಂದಿ ಪ್ರಮಾಣ ವಚನ ಸ್ವೀಕಾರ




ಬೆಂಗಳೂರು: ವಿಧಾನಸಭೆಯ ಸದಸ್ಯರಿಂದ ವಿಧಾನ ಪರಿಷತ್‌ಗೆ ಅವಿರೋಧವಾಗಿ ಆಯ್ಕೆಯಾಗಿರುವ 11 ಮಂದಿ, ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳಿಂದ ಆಯ್ಕೆಯಾಗಿರುವ 6 ಮಂದಿ ಸೇರಿದಂತ ಒಟ್ಟು 17 ಮಂದಿ ವಿಧಾನ ಪರಿಷತ್ ನೂತನ ಸದಸ್ಯರಾಗಿ ಇಂದು ಪ್ರಮಾವಣ ವಚನ ಸ್ವೀಕರಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ ನಡೆದ ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ನೂತನ ಸದಸ್ಯರಿಗೆ ಅಧಿಕಾರ ಹಾಗೂ ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.ವಿಧಾನಸಭೆಯ ಸದಸ್ಯರಿಂದ 11 ಮಂದಿ, ಶಿಕ್ಷಕರ ಕ್ಷೇತ್ರಗಳಿಂದ ಮೂವರು ಹಾಗೂ ಪದವೀಧರ ಕ್ಷೇತ್ರಗಳಿಂದ ಮೂವರು ಸದಸ್ಯರು ಚುನಾಯಿತರಾಗಿದ್ದರು.

ಆಡಳಿತಾರೂಢ ಕಾಂಗ್ರೆಸ್‌ನಿಂದ ಸಚಿವ ಎನ್.ಎಸ್.ಬೋಸರಾಜು, ಕೆ.ಗೋವಿಂದರಾಜು, ಎ.ವಸಂತಕುಮಾರ್, ಡಾ.ಯತೀಂದ್ರ ಸಿದ್ದರಾಮಯ್ಯ, ಐವಾನ್ ಡಿಸೋಜ, ಜಗದೇವ ಗುತ್ತೇದಾರ್, ಬಲ್ಕೀಸ್ ಬಾನು, ಡಿ.ಟಿ.ಶ್ರೀನಿವಾಸ, ರಾಮೋಜಿಗೌಡ, ಡಾ. ಚಂದ್ರಶೇಖರ ಬಸವರಾಜ ಪಾಟೀಲ ಸೇರಿದಂತೆ 10 ಮಂದಿ ಪ್ರಮಾಣ ವಚನ ಸ್ವೀಕಾರ ಮಾಡಿದರು. ಬಿಜೆಪಿಯಿಂದ ಸಿ.ಟಿ.ರವಿ,

ಪುಟ 2ಕ್ಕೆ

## ಲೋಕಸಭೆ ಹಂಗಾಮಿ ಸ್ಪೀಕರ್ ಆಗಿ ಭರ್ತೃಹರಿ ಪ್ರಮಾಣ ವಚನ



ನವದೆಹಲಿ: ಏಳು ಬಾರಿ ಸಂಸದರಾಗಿರುವ ಭರ್ತಹರಿ ಮಹತಾಬ್ ಅವರು ಸೋಮವಾರ 18ನೇ ಲೋಕಸಭೆಗೆ ಹಂಗಾಮಿ ಸ್ಪೀಕರ್ ಆಗಿ ಪ್ರಮಾಣ ವಚನ ಸ್ವೀಕರಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಂಗಾಮಿ ಸ್ಪೀಕರ್ ಭರ್ತೃಹರಿ ಅವರಿಗೆ ಪ್ರಮಾಣ ವಚನ ಬೋಧಿಸಿದರು. ಆದಾಗ್ಯೂ, ಹಂಗಾಮಿ ಸ್ಪೀಕರ್ ಆಗಿ ಇವರನ್ನು ನೇಮಿಸಿದ್ದಕ್ಕಾಗಿ ಪ್ರತಿಪಕ್ಷಗಳು ಕೇಂದ್ರವನ್ನು ತರಾಟೆಗೆ ತೆಗೆದುಕೊಂಡಿವೆ.

ಎಂಟು ಅವಧಿಯ ಲೋಕಸಭಾ ಸದಸ್ಯರಾಗಿರುವ ಅತ್ಯಂತ ಹಿರಿಯ ಸದಸ್ಯ ಕೋಡಿಕುನ್ನಿಲ್ ಸುರೇಶ್ ಅವರನ್ನು ಕಡೆಗಣಿಸಿ ಭರ್ತೃಹರಿ ಅವರನ್ನು ಹಂಗಾಮಿ ಸ್ಪೀಕರ್ ಮಾಡಿರುವುದು ತರವಲ್ಲ ಎಂದು ಪ್ರತಿಪಕ್ಷಗಳು ಆರೋಪಿಸಿವೆ.ದಲಿತ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕೆ ಸುರೇಶ್ ಅವರನ್ನು ದೂರವಿಡಲಾಗಿದೆ ಎಂದು ಪ್ರತಿಪಕ್ಷಗಳು ಕಿಡಿಕಾರಿವೆ.

ಪುಟ 2ಕ್ಕೆ

## ಬಡವರಿಗೆ 50–100 ಎಕರೆ ಜಾಗದಲ್ಲಿ ಲೇಔಟ್ ಮಾಡುತ್ತೇವೆ

ರಾಮನಗರ: ಯಾರು ಏನೇ ಟೀಕೆ ಮಾಡಲಿ. ನಾನು ಚನ್ನಪಟ್ಟಣ ಕ್ಷೇತ್ರದ ಜನರ ಋಣ ತೀರಿಸುತ್ತೇನೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಚನ್ನಪಟ್ಟಣ ತಾಲೂಕಿನ ಕೋಡಂಬಳ್ಳಿ ಹಾಗೂ ಅಕ್ಕೂರು



ಜಿ.ಪಂ.ವ್ಯಾಪ್ತಿಯಲ್ಲಿ ಸರ್ಕಾರದ ವತಿಯಿಂದ ನಡೆದ 'ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮದಲ್ಲಿ ಜನರ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಪುಟ 2ಕ್ಕೆ

## ರಾಜ್ಯಾದ್ಯಂತ ಮೀನು, ಚಿಕನ್ ಕಬಾಬ್‌ಗೆ ಕೃತಕ ಬಣ್ಣ ಬಳಕೆ ನಿಷೇಧ



ಬೆಂಗಳೂರು: ರಾಜ್ಯಾದ್ಯಂತ ಮಾರಾಟವಾಗುತ್ತಿರುವ ವೆಜ್/ಚಿಕನ್/ಫಿಶ್ ಇತರೆ ಕಬಾಬ್‌ಗಳಲ್ಲಿ ಕೃತಕ ಬಣ್ಣದ ಬೆರೆಸುವಿಕೆಯಿಂದಾಗಿ ಸಾರ್ವಜನಿಕರ, ಗ್ರಾಹಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದರಿಂದ ಇವುಗಳ ತಯಾರಿಕೆಯಲ್ಲಿ ಕೃತಕ ಬಣ್ಣ ಬೆರೆಸುವುದನ್ನು ನಿಷೇಧಿಸಿ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಆರೋಗ್ಯದ ಮೇಲೆ ದುಷ್ಪರಿಣಾಮ ಹಿನ್ನೆಲೆ ಕ್ರಮ; ರಾಜ್ಯಾದ್ಯಂತ ಮಾರಾಟ ಮಾಡಲಾಗುತ್ತಿರುವ ಕಬಾಬ್?ಗೆ ಕೃತಕ ಬಣ್ಣ ಬೆರಸುವಿಕೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದಾಗಿ ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಮಾರಾಟ ಮಾಡಲಾಗುತ್ತಿರುವ 39 ಕಬಾಬ್‌ಗಳ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯುಗಳಲ್ಲಿ ಪರೀಕ್ಷೆಗೆ ಒಳಪಡಿಸಲಾಗಿರುತ್ತದೆ. ಹೀಗೆ ಪರೀಕ್ಷೆಗೊಳಪಡಿಸಿದ ಮಾದರಿಗಳಲ್ಲಿ 8 ಕಬಾಬ್‌ನ ಮಾದರಿಗಳು ಕೃತಕ ಬಣ್ಣದಿಂದ (ಸನ್‌ಸೆಟ್ ಯೆಲ್ಲೋ 7 ಮಾದರಿಗಳು ಹಾಗೂ ಸನ್‌ಸೆಟ್ ಯೆಲ್ಲೋ ಮತ್ತು ಕಾರ್ಮೋಸಿನ್ ಹೊಂದಿರುವ ಮಾದರಿಗಳು 1) ಕೂಡಿರುವುದು ಅಸುರಕ್ಷಿತ ಅನ್ನೋದು ಪರೀಕ್ಷಾ ವರದಿಗಳಲ್ಲಿ ಕಂಡುಬಂದಿದೆ. ಹೀಗಾಗಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006 ರ ನಿಯಮ 3(1) (zz) (viii)ರನ್ವಯ ಅಸುರಕ್ಷಿತ ಎಂದು ವರದಿ ಮಾಡಲ್ಪಟ್ಟಿರುತ್ತವೆ.

## ಉಪಮುಖ್ಯಮಂತ್ರಿ ಕುರ್ಚಿ ಮೇಲೆ ಕಣ್ಣಿಟ್ಟ ಸಚಿವರಾರು?

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ ಮತ್ತೆ ಸದ್ದು ಮಾಡುತ್ತಿದೆ. ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆ ಸಚಿವ ಕೆ.ಎನ್. ರಾಜಣ್ಣ ಅವರು ಮೂರು ಡಿಸಿಎಂ ಹುದ್ದೆ ಸೃಷ್ಟಿಯ ವಿಚಾರವನ್ನು ಮತ್ತೆ ಮುನ್ನೆಲೆಗೆ ತಂದಿದ್ದಾರೆ. ಇದು ರಾಜ್ಯ ರಾಜಕೀಯದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಲೋಕಸಭೆ ಚುನಾವಣೆ ಮುನ್ನ ಸಹ ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ ಹುದ್ದೆ ಹೇಳಿಕೆಗಳು ಸದ್ದು ಮಾಡಿದ್ದವು. ಇದು ಪ್ರತಿಪಕ್ಷಗಳಿಗೆ ಆಹಾರವಾಗಿತ್ತು. ಈ ಬಗ್ಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹೈ ಕಮಾಂಡ್‌ಗೆ ದೂರು ನೀಡಿದ್ದರು. ಬಳಿಕ



ಹೈಕಮಾಂಡ್ ಮಧ್ಯಪ್ರವೇಶಿಸಿ, ಡಿಸಿಎಂ ಹುದ್ದೆಯ ವಿಚಾರವಾಗಿ ಸಾರ್ವಜನಿಕವಾಗಿ ಚರ್ಚಿಸದಂತೆ ರಾಜ್ಯ ನಾಯಕರಿಗೆ ಸೂಚನೆ ನೀಡಿತ್ತು. ನಂತರ ಡಿಸಿಎಂ ಹುದ್ದೆ ಸೃಷ್ಟಿ ವಿಚಾರ ತಣ್ಣಗಾಗಿತ್ತು. ಇದೀಗ ಮತ್ತೊಮ್ಮೆ ಡಿಸಿಎಂ ಹುದ್ದೆ ವಿಚಾರ ಚರ್ಚೆಯಾಗುತ್ತಿದೆ.

ಏನಿದು ಡಿಸಿಎಂ ಹುದ್ದೆಯ: ರಾಜಕೀಯ ಲೆಕ್ಕಾಚಾರ?: ಕಾಂಗ್ರೆಸ್ ಪಾಳಯದಲ್ಲಿ ಡಿಸಿಎಂ ಹುದ್ದೆಯ ತಿಕ್ಕಾಟ ಮತ್ತೆ ಜೋರಾಗಿದೆ. ಸದ್ಯ ಡಿ.ಕೆ. ಶಿವಕುಮಾರ್ ಕಾಂಗ್ರೆಸ್

ಪುಟ 2ಕ್ಕೆ

## ಮೃತರ ಕುಟುಂಬಕ್ಕೆ ಎರಡು ಲಕ್ಷ ಪರಿಹಾರ

ಆಲೂರು: ತಾಲ್ಲೂಕಿನ ಮುತ್ತಿಗೆ ಗ್ರಾಮದಲ್ಲಿ ಈಜಲು ಹೋಗಿ ಮೃತಪಟ್ಟಿದ್ದ ಕುಟುಂಬಕ್ಕೆ ಗೃಹಮಂತ್ರಿ ಜಿ.ಪರಮೇಶ್ವರ್,ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್ ರಾಜಣ್ಣ,ಅರಸೀಕೆರೆ ವಿಧಾನಸಭಾ ಕ್ಷೇತ್ರದ ಶಾಸಕರಾದ



ಶಿವಲಿಂಗೇಗೌಡ,ಸಕಲೇಶಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿಮೆಂಟ್ ಮಂಜು ಬೇಟಿ ನೀಡಿ ಮೃತರ ಕುಟುಂಬಕ್ಕೆ ತಲಾ ಎರಡು ಲಕ್ಷ ರೂ ಚೆಕ್ ನೀಡಿದರು. ಚೆಕ್ ವಿತರಿಸಿ ನಂತರ ಮಾತನಾಡಿದ ಗೃಹಸಚಿವರು ಮೇ 16ರಂದು ಒಂದೇ ಗ್ರಾಮದ ನಾಲ್ವರು ಮಕ್ಕಳು ಈಜಲು ಹೋಗಿ ಮೃತಪಟ್ಟಿರುವ ದುರ್ಘಟನೆ ನೆಡೆದಿದ್ದು ನೋವಿನ ಸಂಗತಿಯಾಗಿದೆ.ಈ ಗ್ರಾಮಕ್ಕೆ ತಡವಾಗಿ ಆಗಮಿಸಿದ್ದೇವೆ ಕಾರಣ ಲೋಕಸಭೆ ಚುನಾವಣೆಯ ನೀತಿಸಂಹಿತೆ ಜಾರಿಯಲ್ಲಿದ್ದರಿಂದ ಪರಿಹಾರವನ್ನು ನೀಡಲು ಸಾಧ್ಯವಾಗದಿದ್ದಕ್ಕೆ ಕ್ಷಮೆಯಿರಲಿ,ಮುಖ್ಯಮಂತ್ರಿ ಪರಿಹಾರ ಸಂಪುಟದಲ್ಲಿ ಚಿಕ್ಕದಾಗಿ ಕುಟುಂಬಕ್ಕೆ ತಲಾ ಎರಡು ಲಕ್ಷ ಘೋಷಿಸಿದ್ದು,ಸ್ವಿಕರಿಸಿದ ಪೋಷಕರಿಗೆ ಸಾಂತ್ವನ ಹೇಳಿದರು.ಮೃತರ ಮಕ್ಕಳ ಮನೆಯನ್ನು ಗಮನಿಸಿದ ಅವರು ಕೂಡಲೆ ಮನೆಯನ್ನು ಜಾರಿಗೊಳಿವಂತೆ ಅಧಿಕಾರಿಗಳಿಗೆ ತಿಳಿಸಿದರು. ಈ ಸಂಧರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಸತ್ಯಭಾಮ.ಜಿಲ್ಲಾ ವರಿಷ್ಠಾಧಿಕಾರಿ ಮೊಹಮ್ಮದ್ ಸುಜಿತಾ. ಜಿಲ್ಲಾಹಾಗೂ ತಾಲ್ಲೂಕಿನ ಕಾಂಗ್ರೇಸ್ ಮುಖಂಡರುಗಳು.ಎಲ್ಲಾ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ



ಚಾಮರಾಜನಗರ,ರಾಜ್ಯ ಸರ್ಕಾರ ಅನುಷ್ಠಾನಗೊಳಿಸಿರುವ ಮಹತ್ತರ ಐದು ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪುಟ 2ಕ್ಕೆ

## ಕಾರ್ಮಿಕ ಸಚಿವ ಸಂತೋಷ್‌ಲಾಡ್ ಪ್ರಗತಿ ಪರಿಶೀಲನಾ ಸಭೆ



ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಅವರು ಇಂದು ಕಲಘಟಗಿಯ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಅಲ್ಲದೆ ಬೇಡ್ತಿ ನಾಲಾ ಕಾಮಗಾರಿಯ ಪ್ರಗತಿಯನ್ನು ವೀಕ್ಷಿಸಿದರು. ಪಟ್ಟಣ ಪಂಚಾಯಿತಿಯಲ್ಲಿ ನಗರೋತ್ಥಾನ ಕಾಮಗಾರಿ ಅಪೂರ್ಣಗೊಂಡಿದ್ದು. ಅದನ್ನು ಕೂಡಲೇ ಮುಗಿಸಲು ಕ್ರಮ ಕೈಗೊಳ್ಳಬೇಕು. ಇಲ್ಲದೇ ಇದ್ದರೆ

ಪುಟ 2ಕ್ಕೆ

## ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಸಭೆ



ಚಾಮರಾಜನಗರ: ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರಾದ ಕೆ. ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಸಭೆ ಇಂದು ನಡೆಯಿತು.

ಪುಟ 2ಕ್ಕೆ




ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಮಂಗಳವಾರ 25 ಜೂನ್ 2024
TUESDAY 25 June 2024

# 17 ಮಂದಿ ಪ್ರಮಾಣ ವಚನ ಸ್ವೀಕಾರ

ಪುಟ 1ರಿಂದ

ಎನ್.ರವಿಕುಮಾರ್, ಮೂಳೆ ಮಾರುತಿರಾವ್, ಡಾ.ಧನಂಜಯ ಸರ್ಜಿ ಸೇರಿದಂತೆ ನಾಲ್ಕು ಮಂದಿ ಹಾಗೂ ಜೆಡಿಎಸ್‌ನಿಂದ ಟಿ.ಎನ್.ಜವರಾಯಿಗೌಡ, ಎಸ್.ಎಲ್.ಭೋಜೇಗೌಡ, ಕೆ. ವಿವೇಕಾನಂದ ಸೇರಿದಂತೆ ಮೂವರು ಮೇಲನೆ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಸಚಿವ ಹೆಚ್.ಕೆ.ಪಾಟೀಲ್, ಶಾಸಕರು, ರಾಜಕೀಯ ಪಕ್ಷಗಳ ಮುಖಂಡರು, ಅಭಿಮಾನಿಗಳು ಹಾಗೂ ಕುಟುಂಬದವರು ಹಾಜರಿದ್ದು, ನೂತನ ಮೇಲನೆ ಸದಸ್ಯರನ್ನು ಅಭಿನಂದಿಸಿದರು.

# ಲೋಕಸಭೆ ಹಂಗಾಮಿ ಸ್ಪೀಕರ್ ಆಗಿ ಭರ್ತೃಹರಿ ಪ್ರಮಾಣ ವಚನ

ಪುಟ 1ರಿಂದ

1957 ರಲ್ಲಿ ಜನಿಸಿದ ಮಹತಾಬ್ ಒಡಿಶಾದ ಮೊದಲ ಮುಖ್ಯಮಂತ್ರಿ ದಿವಂಗತ ಹರೇಕಷ್ಣ ಮಹತಾಬ್ ಅವರ ಮಗ. ಭದ್ರಕ್‌ನಲ್ಲಿ ತನ್ನ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ ನಂತರ, ಅವರು ತಮ ಚುನಾವಣಾ ಅಫಿಡವಿಟ್ನ ಪ್ರಕಾರ 1978 ರಲ್ಲಿ ಉತ್ಕಲ್ ವಿಶ್ವವಿದ್ಯಾಲಯದಿಂದ ಬ್ಯಾಚುಲರ್ ಆಫ್ ಆರ್ಟ್ಸ್ ಮತ್ತು ನಂತರ ಇಂಗ್ಲಿಷ್ನಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದುಕೊಂಡಿದ್ದರು.

ಕೆಲವು ದಶಕಗಳ ಕಾಲ ಒಡಿಶಾದ ಮಾಜಿ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ನೇತತ್ವದ ಬಿಜು ಜನತಾ ದಳ (ಬಿಜೆಡಿ) ನ ಭಾಗವಾಗಿದ್ದ ನಂತರ ಮಹತಾಬ್ 2024 ರ ಲೋಕಸಭೆ ಚುನಾವಣೆಗೆ ಮುಂಚಿತವಾಗಿ ಪಕ್ಷದೊಂದಿಗಿನ ಸಂಬಂಧವನ್ನು ಕಡಿದುಕೊಂಡರು. ಇತ್ತೀಚಿನ ವರ್ಷಗಳಲ್ಲಿ ಪಕ್ಷದ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ತರುವಾಯ, ಅವರು ಬಿಜೆಪಿಗೆ ಸೇರಿದರು, ಅದು ನಂತರ ಅವರನ್ನು ಕಟಕ್ ಸ್ಥಾನಕ್ಕೆ ತನ್ನ ಅಭ್ಯರ್ಥಿ ಎಂದು ಘೋಷಿಸಿತು. 2024 ರ ಚುನಾವಣೆಯಲ್ಲಿ, ಮಹತಾಬ್ ಅವರು ತಮ ಹಿಂದಿನ ಪಕ್ಷದ ಸಹೋದ್ಯೋಗಿ ಸಂತಪ್?ಟ ಮಿಶ್ರಾ ಅವರನ್ನು 57,077 ಮತಗಳಿಂದ ಸೋಲಿಸುವ ಮೂಲಕ ಸತತ ಏಳನೇ ಬಾರಿಗೆ ಸಂಸದರಾಗಿ ಆಯ್ಕೆಯಾಗಿದ್ದಾರೆ.

# ಬಡವರಿಗೆ 50–100 ಎಕರೆ ಜಾಗದಲ್ಲಿ ಲೇಔಟ್ ಮಾಡುತ್ತೇವೆ

ಪುಟ 1ರಿಂದ

ಇಲ್ಲಿ ಸಾವಿರಾರು ಜನರು ತಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಮುಗಿ ಬಿದ್ದು ಅರ್ಜಿ ಸಲ್ಲಿಸುತ್ತಿದ್ದಾರೆ. ಇದನ್ನು ನೋಡಿದರೆ ಅವರ ಪರಿಸ್ಥಿತಿ ಅರ್ಥವಾಗುತ್ತದೆ. ನನ್ನ ಬಗ್ಗೆ ಯಾರು ಏನೇ ಟೀಕೆ ಮಾಡಲಿ, ನನಗೆ ಈ ಜನರ ಸಮಸ್ಯೆಗೆ ಪರಿಹಾರ ನೀಡುವುದಷ್ಟೇ ಮುಖ್ಯ ಎಂದರು. ಚನ್ನಪಟ್ಟಣದ ಬಡವರಿಗೆ ನಿವೇಶನ ನೀಡಲು 50 ಕೋಟಿ ಹಣ ತಂದು 50–100 ಎಕರೆ ಜಾಗದಲ್ಲಿ ಲೇಔಟ್ ಮಾಡುತ್ತೇವೆ. ಬಡವರಿಗೆ ಮನೆ ಕಟ್ಟಿ ಕೊಡಲಾಗುವುದು. ಕನಿಷ್ಠ 10 ಸಾವಿರ ಜನರಿಗೆ ನಿವೇಶನ ಹಂಚಿಕೆ ಮಾಡುತ್ತೇವೆ ಎಂದು ಭರವಸೆ ಕೊಟ್ಟರು. ಆರ್ಥಿಕವಾಗಿ ಹಿಂದುಳಿದ ಜನರಿಗೆ ಬೀದಿ ವ್ಯಾಪಾರಿಗಳಿಗೆ ಹಾಗೂ ಕೊಳವೆ ಬಾವಿ ಕೊರೆಸಲು, ಹಂದಿ, ಹಸು, ಕುರಿ ಸಾಕುವವರಿಗೆ ನೀಡುವ 1 ಲಕ್ಷ ಸಾಲ ಸೌಲಭ್ಯವನ್ನು ಕನಿಷ್ಠ 10 ಸಾವಿರ ಜನರಿಗೆ ಕೊಡಿಸಲಾಗುವುದು. ಕಾವೇರಿ ನಿಗಮದಿಂದ ಇಲ್ಲಿ ಕೆನಾಲ್ ಮೂಲಕ ನೀರು ತರಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು. ಕುಮಾರಸ್ವಾಮಿ ಅವರು ಕೇಂದ್ರದಿಂದ ಹಣ ತಂದು ಮಂಡ್ಯ ಜನರಿಗೆ ಉಚಿತ ಟ್ರಾನ್ಸ್‌ಫಾರ್ಮರ್ (ವಿದ್ಯುತ್ ಪರಿವರ್ತಕ) ಹಾಕಿಸಲಿ ನೋಡೋಣ ಎಂದು ಸವಾಲು ಹಾಕಿದ ಶಿವಕುಮಾರ್, ದೊಡ್ಡ ನಾಯಕರೊಬ್ಬರು ನನಗೆ ಏನು ಮಾಡಿದ್ದೀರಿ ಎಂದು ಕೇಳಿದ್ದಾರೆ ಎಂದರು.

ಚನ್ನಪಟ್ಟಣ ಕ್ಷೇತ್ರಕ್ಕೆ ಸೂಕ್ತ ಅಭ್ಯರ್ಥಿ ಬಗ್ಗೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ. ಕಾಂಗ್ರೆಸ್ ಅಭ್ಯರ್ಥಿ ವಿಚಾರವಾಗಿ ಈಗ ಕಮಿಟಿ ರಚನೆ ಮಾಡಿದ್ದೇವೆ. ಸಾಕಷ್ಟು ಸಚಿವರು, ಶಾಸಕರು ಕಮಿಟಿಯಲ್ಲಿದ್ದಾರೆ. ಅಭ್ಯರ್ಥಿ ಆಯ್ಕೆ ಬಗ್ಗೆ ಎಲ್ಲರೂ ಸೇರಿ ತೀರ್ಮಾನ ಮಾಡುತ್ತಾರೆ. ನಾನು ಸ್ಪರ್ಧೆ ಮಾಡಬೇಕು ಅಂದ್ರೂ ಅದನ್ನು ಕಮಿಟಿ ತೀರ್ಮಾನ ಮಾಡುತ್ತದೆ. ಒಂದು ವೇಳೆ ಕಮಿಟಿ ತೀರ್ಮಾನ ಮಾಡಿದ್ರೆ ನಾನು ಅಭ್ಯರ್ಥಿಯಾಗಬೇಕಾಗುತ್ತದೆ ಎಂದು ಡಿ.ಕೆ.ಶಿವಕುಮಾರ್ ಇದೇ ವೇಳೆ ತಿಳಿಸಿದರು. ಮೂವರು ಡಿಸಿಎಂ ಚರ್ಚೆ ವಿಚಾರಕ್ಕೆ, ಈ ವಿಚಾರವನ್ನು ಪಾರ್ಟಿ ತೀರ್ಮಾನ ಮಾಡುತ್ತದೆ. ಯಾರು ಚರ್ಚೆ ಮಾಡಿದ್ದಾರೋ ಗೊತ್ತಿಲ್ಲ ಎಂದರು.

# ಬೆಳಗಾವಿ ಜಿಲ್ಲಾಸ್ಪತ್ರೆಯಲ್ಲಿ ಶೀಘ್ರವೇ ತಾಯಿ ಎದೆ ಹಾಲು ಬ್ಯಾಂಕ್ ಆರಂಭ

ಬೆಳಗಾವಿ: ತಾಯಿ ಹಾಲು ಅಮೃತಕ್ಕೆ ಸಮ. ಹುಟ್ಟಿದ ಮಗುವಿಗೆ ಅದುವೇ ಜೀವಾಮೃತ. ತಾಯಿ ಹಾಲಿಗೆ ಪರ್ಯಾಯ ಕೂಡಾ ತಾಯಿ ಹಾಲೇ. ರೋಗ ನಿವಾರಣೆಯ ದಿವ್ಯ ಪೌಷ್ಟಿಕಾಂಶ ಹೊಂದಿರುವ ಆ ಹಾಲು ಸಿಗದೇ ಅದೆಷ್ಟೋ ಕಂದಮ್ಮಗಳು ಕೊನೆಯುಸಿರೆಳೆದ ಸಾಕಷ್ಟು ನಿದರ್ಶನಗಳಿವೆ. ಈ ನಿಟ್ಟಿನಲ್ಲಿ ಇದೀಗ ಬೆಳಗಾವಿ ಜಿಲ್ಲಾಸ್ಪತ್ರೆ ತಾಯಿ ಎದೆ ಹಾಲು ಬ್ಯಾಂಕ್ ಸ್ಥಾಪಿಸಿದೆ.

ಜಿಲ್ಲಾಸ್ಪತ್ರೆಗೆ ದಾಖಲಾಗುವ ಗರ್ಭಿಣಿಯರಿಗೆ ಹೆರಿಗೆಯಾದ ಬಳಿಕ ಅಗತ್ಯಕ್ಕೆ ತಕ್ಕಷ್ಟು ಪ್ರಮಾಣದಲ್ಲಿ ಎದೆಹಾಲು ಬರುವುದಿಲ್ಲ. ಕೆಲವು ಬಾಣಂತಿಯರು ಮೃತಪಟ್ಟರೆ, ಇನ್ನು ಕೆಲವು ಅನಾಥ ಶಿಶುಗಳು ಇರುತ್ತವೆ. ಇಂಥ ಮಕ್ಕಳಿಗೆ ಹಾಲಿನ ಕೊರತೆ ನೀಗಿಸಲು ಜಿಲ್ಲಾಸ್ಪತ್ರೆಯಲ್ಲಿ 'ಮಿಲ್ಕ್ ಬ್ಯಾಂಕ್' ತೆರೆಯಲಾಗಿದೆ. ಆರೋಗ್ಯವಂತ ತಾಯಂದಿರಿಂದ ಹಾಲು ಪಡೆದು ಈ ಬ್ಯಾಂಕ್‌ನಲ್ಲಿ ಸಂಗ್ರಹಿಸಿಡಲಾಗುತ್ತದೆ. ಹೀಗೆ ಪಡೆದ ಹಾಲನ್ನು ಸಂಸ್ಕರಿಸಿದ ಬಳಿಕ ಅಗತ್ಯವಿರುವ ಶಿಶುಗಳಿಗೆ ನೀಡುವ ಗುರಿ ಹೊಂದಲಾಗಿದೆ.




ಜಿಲ್ಲಾಸ್ಪತ್ರೆಯ ಮಕ್ಕಳ ವಿಭಾಗದ ಪಕ್ಕದಲ್ಲಿರುವ ಎನ್ಐಸಿಯು (ನವಜಾತ ತೀವ್ರ ನಿಗಾ ಘಟಕ) ಬಳಿ ತಾಯಿ ಎದೆ ಹಾಲು ಬ್ಯಾಂಕ್ ಇದೆ. ಆಸ್ಪತ್ರೆಗೆ ದಾಖಲಾಗಿರುವ ಆರೋಗ್ಯವಂತ ತಾಯಂದಿರಿಗೆ ಹಾಲು ದಾನ ಮಾಡುವ ಬಗ್ಗೆ ವೈದ್ಯರು ಮನವೊಲಿಸುತ್ತಿದ್ದಾರೆ. ತಾಯಂದಿರು ಸ್ವಯಂ ಪ್ರೇರಣೆಯಿಂದ ಹೋಗಿ ಹಾಲು ದಾನ ಮಾಡಬಹುದು. ಮಿಲ್ಕ್ ಬ್ಯಾಂಕ್? ಬಗ್ಗೆ ಆಸ್ಪತ್ರೆಯ ವೈದ್ಯರು ಜಾಗೃತಿ ಮೂಡಿಸಲು ಯೋಜನೆಯನ್ನೂ ರೂಪಿಸಿದ್ದಾರೆ.

ತಾಯಿ ಎದೆ ಹಾಲು ಬ್ಯಾಂಕ್ ಸದ್ಯ ಬೆಂಗಳೂರಿನ ವಾಣಿ ವಿಲಾಸ ಸರ್ಕಾರಿ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಅದು ಬಿಟ್ಟರೆ ಎರಡನೇಯದು ಬೆಳಗಾವಿಯಲ್ಲಿ ಆರಂಭವಾಗುತ್ತಿದೆ. ಮಿಲ್ಕ್ ಬ್ಯಾಂಕ್?ಗೆ ಅಗತ್ಯವಿರುವ ಮಿಲ್ಕ್ ಸಕ್ ಮಷಿನ್, ಡೀಪ್ ಫ್ರೀಜರ್, ರೆಫ್ರಿಜಿರೇಟರ್, ಲಾಮಿನಾರ್ ಏರ್ ಫ್ಲೋ, ಪಾಶ್ಚರೈಸರ್, ಹಾಟ್ ಏರ್ ಓವೆನ್ ಉಪಕರಣಗಳೂ ಸೇರಿದಂತೆ ಹಾಲು ಸಂಗ್ರಹಿಸಲು ಬೇಕಾದ ಎಲ್ಲ ರೀತಿಯ ವ್ಯವಸ್ಥೆ ಮಾಡಲಾಗಿದೆ. ಶೀಘ್ರದಲ್ಲೇ 'ಮಿಲ್ಕ್ ಬ್ಯಾಂಕ್' ಅಧಿಕೃತವಾಗಿ ಲೋಕಾರ್ಪಣೆಗೊಳ್ಳಲಿದೆ.

ಚಿಕ್ಕ ಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಶೈಲೇಶ ಪಾಟೀಲ 'ಈಟಿವಿ ಭಾರತ್'?ಗೆ ಪ್ರತಿಕ್ರಿಯಿಸಿ, "ತಾಯಿ ಎದೆಹಾಲು ಬ್ಯಾಂಕ್ ಎಂದರೆ ಅಮೃತಧಾರೆ.

ಸಮಗ್ರ ಹಾಲುಣಿಸುವ ನಿರ್ವಹಣಾ ಕೇಂದ್ರ. ಇನ್ನು ಹಾಲನ್ನು ಪಡೆಯುವ ಮುನ್ನ ತಾಯಿಯ ಅನುಮತಿ ಪಡೆಯಲಾಗುತ್ತದೆ. ಅಲ್ಲದೆ ತಾಯಿಗೆ ಅವಶ್ಯವಿರುವ ರಕ್ತ ಪರೀಕ್ಷೆಗಳನ್ನು ಮಾಡಿ, ಯಾವುದೇ ಸೋಂಕುಗಳು ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ದಾನಿಗಳಿಂದ ಹಾಲು ಪಡೆಯಲಾಗುತ್ತದೆ. ಹಾಲಿನ ಅವಶ್ಯಕತೆಯಿರುವ ಮಕ್ಕಳಿಗೆ ಆ ಹಾಲು ನೀಡಲಾಗುತ್ತದೆ. ಇನ್ನು ಆರು ತಿಂಗಳವರೆಗೆ ಶೇಖರಿಸಿಟ್ಟ ಹಾಲನ್ನು ಉಪಯೋಗಿಸಬಹುದು" ಎಂದು ವಿವರಿಸಿದರು.

ಬಿಮ್ಸ್ ನಿರ್ದೇಶಕ ಡಾ.ಅಶೋಕಕುಮಾರ ಶೆಟ್ಟಿ ಮಾತನಾಡಿ, "ಕೆಲವು ತಾಯಂದಿರಲ್ಲಿ ಹಾಲಿನ ಪ್ರಮಾಣ ಜಾಸ್ತಿಯಾಗಿರುತ್ತದೆ. ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ ಎಂದುಕೊಂಡು ಎದೆ ಹಾಲನ್ನು ಹೊರಗೆ ಹಾಕುತ್ತಿರುತ್ತಾರೆ. ಅಂಥವರಿಂದ ಹಾಲು ಸಂಗ್ರಹಿಸಿ, ಆ ಹಾಲನ್ನು ಪಾಶ್ಚರೈಸೇಶನ್ ಮಾಡಿ, ಅವಶ್ಯಕತೆ ಇರುವ ಮಕ್ಕಳಿಗೆ ಕುಡಿಸಲಾಗುತ್ತದೆ. ಎದೆ ಹಾಲು ಬ್ಯಾಂಕ್ ಉದ್ಘಾಟನೆಗೆ ಅಂತಿಮ ಘಟ್ಟ ತಲುಪಿದ್ದು, ಬಾಟಲಿಗಳನ್ನು ಸ್ಟೆರಿಲೈಸ್? ಮಾಡುವ ಮಷಿನ್? ರಿಪೇರಿಗೆ ಬಂದಿದ್ದು, ಅದು ರಿಪೇರಿ ಆದ ತಕ್ಷಣ ಬ್ಯಾಂಕ್ ಆರಂಭಿಸುತ್ತೇವೆ" ಎಂದು ತಿಳಿಸಿದರು.

# ಮತ್ತೊಂದು ಪ್ರಕರಣ ಸಿಐಡಿಗೆ ವಹಿಸಿದ ಸರ್ಕಾರ



ಬೆಂಗಳೂರು: ಸೂರಜ್ ರೇವಣ್ಣ ಅಸಹಜ ಲೈಂಗಿಕ ದೌರ್ಜನ್ಯ ಕೇಸ್‌ನ್ನು ಸಿಐಡಿಗೆ ವಹಿಸಿದ ಬೆನ್ನಲ್ಲೇ ಇದೀಗ ಮತ್ತೊಂದು ಪ್ರಕರಣವನ್ನು ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದೆ. ಬೆಂಗಳೂರಿನಲ್ಲಿ ಕೊಲೆಯಾಗಿದ್ದ ಪ್ರಬುದ್ಧಾಳ ಕೇಸ್ (ಸದ್ಯ ಸಿಐಡಿ ತನಿಖೆಗೆ ನೀಡಲಾಗಿದೆ. ಮೃತಳ ತಾಯಿ ಸೌಮ್ಯಾ ಅವರು ಖುದ್ದು ಸಿಎಂ ಭೇಟಿಯಾಗಿ ಮನವಿ ಮಾಡಿದ್ದರು. ಅವರ ದೂರಿನ ಮೇರೆಗೆ ಸಿಐಡಿಗೆ ವಹಿಸಲು ಡಿಜಿ&ಐಜಿಪಿ ಅಲೋಕ್ ಮೋಹನ್‌ಗೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಸಿಎಂ ಭೇಟಿ ಬಳಿಕ ಕೊಲೆಯಾಗಿದ್ದ ಪ್ರಬುದ್ಧಾ ತಾಯಿ ಸೌಮ್ಯಾ ಮಾಧ್ಯಮದವರೊಂದಿಗೆ ಮಾತನಾಡಿದ್ದು, ಪದವಿ ಓದುತ್ತಿದ್ದ ನನ್ನ ಮಗಳನ್ನು ಯುವಕನೊಬ್ಬ ಕೊಲೆ ಮಾಡಿದ್ದಾನೆ. ಕೆಲವು ಅನುಮಾನಗಳಿದ್ದವು, ಆ ಯುವಕನಿಗೆ ಬೇಲ್ ಕೂಡ ಸಿಕ್ಕಿತ್ತು. ಆರೋಪಿಗೆ ಬೇಲ್ ಸಿಕ್ಕಿದೆ ಅಂತಾ ನಾವು ಸುಮ್ಮನಿದ್ದರೆ ಸರಿ ಹೋಗಲ್ಲ. ಹಾಗಾಗಿ ಸಿಐಡಿಗೆ ಕೊಡಬೇಕು ಅಂತಾ ಮುಖ್ಯಮಂತ್ರಿಗಳನ್ನ ಭೇಟಿ ಮಾಡಿದ್ದೆವು ಎಂದರು.

ನನ್ನ ಮನವಿ ಮೇರೆಗೆ ಸಿಎಂ ಸಿದ್ದರಾಮಯ್ಯನವರು ಸಿಐಡಿಗೆ ವಹಿಸಿದ್ದಾರೆ. ಹೆಣ್ಣುಮಕ್ಕಳು ನಿರಾಕರಿಸಿದರೆ ಅವರನ್ನು ಬರ್ಬರವಾಗಿ ಹತ್ಯೆ ಮಾಡುತ್ತಾರೆ. ಸಮಾಜಕ್ಕೆ ಯಾವ ಸಂದೇಶ ಸಿಗುತ್ತಿದೆ ಅಂತಾ ನನಗೆ ಗೊತ್ತಾಗುತ್ತಿಲ್ಲ ಎಂದಿದ್ದಾರೆ.

ಬೆಂಗಳೂರಿನ ಬಿ.ಎಂ.ಎಸ್. ಮಹಿಳಾ ಕಾಲೇಜಿನಲ್ಲಿ ದ್ವಿತೀಯ ಬಿಬಿಎ ಮಾಡುತ್ತಿದ್ದ ಪ್ರಬುದ್ಧಳನ್ನು ಮೇ 15ರ ಸಂಜೆ ಮನೆಯಲ್ಲೇ ಭೀಕರ ಹತ್ಯೆ ಮಾಡಲಾಗಿತ್ತು. ಕತ್ತು ಹಾಗೂ ಕೈ ಕೊಯ್ದ ಸ್ಥಿತಿಯಲ್ಲಿ ಶವ ಪತ್ತೆಯಾಗಿತ್ತು. ಮೇಲ್ನೋಟಕ್ಕೆ ಇದು ಆತ್ಮಹತ್ಯೆ ಎಂದು ಮೊದಲು ಪೊಲೀಸರು ಪರಿಗಣಿಸಿದ್ದರು. ನನ್ನ ಮಗಳು ಆತ್ಮಹತ್ಯೆ ಮಾಡಿಕೊಳ್ಳುವಷ್ಟು ಹೇಡಿಯಲ್ಲ ಎಂದು ಮಗಳ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದರು.

# ಶ್ರೀ ಮಲ್ಯೆ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಸಭೆ

ಪುಟ 1ರಿಂದ

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಾಧಿಕಾರದ ಸಭೆಯಲ್ಲಿ ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದಲ್ಲಿ ಪ್ರತೀ ವರ್ಷ ನಡೆಸುವ ಉಚಿತ ಸಾಮೂಹಿಕ ವಿವಾಹವನ್ನು ಈ ಬಾರಿ ಆಗಸ್ಟ್ 21ರಂದು ನಡೆಸುವ ಸಂಬಂಧ ವಿವರವಾಗಿ ಚರ್ಚಿಸಲಾಯಿತು.

ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಆವರಣದ ವಿವಿಧ ಕಡೆಗಳಲ್ಲಿ ಹೊಸದಾಗಿ ಕಾಮಗಾರಿ ನಿರ್ವಹಣೆ ಸಂಬಂಧ ಪ್ರಸ್ತಾಪಿಸಿ ವಿಸ್ತೃತವಾಗಿ ಚರ್ಚೆ ನಡೆಸಲಾಯಿತು.

ಸಂಪರ್ಕ ರಸ್ತೆ, ಮಲೈ ಮಹದೇಶ್ವರಬೆಟ್ಟದ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಪ್ರಾಧಿಕಾರದಿಂದ ಮೂಲ ಸೌಕರ್ಯ, ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ವಿವಿಧ ಹಕ್ಕು ಬಾದ್ಯತೆಗಳು ಮುಡಿ ಕಾಣಿಕೆ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು.

ದಾಸೋಹ, ಲಾಡು, ಪೂಜಾ ವಿಭಾಗಕ್ಕೆ ಬೇಕಾದ ಪಡಿತರ ಸಾಮಾಗ್ರಿಗಳ ಸರಬರಾಜು, ವಾಹನ ಪ್ರವೇಶ ಶುಲ್ಕ, ಮಲೈಮಹದೇಶ್ವರಸ್ವಾಮಿ ಕ್ಷೇತ್ರವನ್ನು ಪ್ಲಾಸ್ಟಿಕ್ ಮುಕ್ತ ಪ್ರದೇಶವನ್ನಾಗಿ ಘೋಷಿಸುವ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ತಪಾಸಣಾ ಕೇಂದ್ರ ತೆರೆಯುವ ಕುರಿತು ಪ್ರಸ್ತಾಪಿಸಲಾಯಿತು.

ಪ್ರಾಧಿಕಾರಕ್ಕೆ ಸೇರಿದ ಮಾಸ್ಟರ್ ಪ್ಲಾನ್ ಆವರಣದಲ್ಲಿ ಹೊಸದಾಗಿ ನಿರ್ಮಿಸುತ್ತಿರುವ 512 ಕೊಠಡಿಗಳುಳ್ಳ ಕಟ್ಟಡ ನಿರ್ಮಾಣ ಕಾಮಗಾರಿ ಸಂಬಂಧ ಪ್ರಗತಿ ವಿವರ ಪಡೆದ ಜಿಲ್ಲಾ ಉಸ್ತುವಾರಿ ಸಚಿವರು ಆಗಸ್ಟ್ 21ರಂದು ನಡೆಯಲಿರುವ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೂ ಮೊದಲೇ ಕಟ್ಟಡ ಪೂರ್ಣಗೊಳಿಸಲು ಸೂಚಿಸಿದರು.

ಕ್ಷೇತ್ರದ ಕಾಮಗಾರಿ ಹಾಗೂ ಅಭಿವೃದ್ಧಿ ಕುರಿತು ಸೇರಿದಂತೆ ಇನ್ನಿತರ ಪ್ರಮುಖ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಾಲೂರು ಮಠದ ಶ್ರೀಗಳಾದ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮಿ, ಎಂಎಸ್ಐಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್, ಹೆಚ್.ಎಂ. ಗಣೇಶ್ ಪ್ರಸಾದ್, ಸಿ.ಎನ್. ಮಂಜೇಗೌಡ, ಡಾ. ಡಿ ತಿಮ್ಮಯ್ಯ, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ,

ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ಎ.ಇ. ರಘು, ಉಪ ಕಾರ್ಯದರ್ಶಿ ಚಂದ್ರಶೇಖರ್, ಉಪವಿಭಾಗಾಧಿಕಾರಿ ಮಹೇಶ್,

ಮಲೈಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಸಂತೋಷ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಎಂಜಿನಿಯರ್ ಮಹೇಶ್, ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಕಾರ್ಮಿಕ ಸಚಿವ ಸಂತೋಷ್‌ಲಾಡ್ ಪ್ರಗತಿ ಪರಿಶೀಲನಾ ಸಭೆ

ಪುಟ 1ರಿಂದ

ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು ಎಂದು ಸಚಿವರು ಹೇಳಿದರು. ಕೊಳಚೆ ನಿರ್ಮೂಲನಾ ಮಂಡಳಿಯಿಂದ ಮನೆಗಳು ಮಂಜೂರಾಗಿದ್ದು, ಅಪೂರ್ಣಗೊಂಡಿವೆ. ಅವುಗಳನ್ನು ಕೂಡಲೇ ಪೂರ್ಣಗೊಳಿಸಲು ಸೂಚನೆ ನೀಡಿದರು. ಇದೇ ವೇಳೆ ಹಕ್ಕುಪತ್ರ ನೀಡಲು ಕ್ರಮಕೈಗೊಳ್ಳಬೇಕು ಎಂದರು.

ಪಟ್ಟಣ ವ್ಯಾಪ್ತಿಯಲ್ಲಿ ಮನೆ ಇಲ್ಲದವರ ಪಟ್ಟಿ ಮಾಡಿ ಅವರಿಗೆ ಸಿದ್ಧ ಮನೆಗಳನ್ನು ನೀಡಲು ಯೋಜನೆ ರೂಪಿಸಬೇಕು ಎಂದು ಹೇಳಿದರು. ವಾರಕ್ಕೊಮ್ಮೆ ಸಂತೆ ನಡೆಯುತ್ತಿದ್ದು, ಅದಕ್ಕೆ ಸೂಕ್ತ ಜಾಗದ ಕೊರತೆ ಇದೆ. ಎಪಿಎಂಸಿಯಲ್ಲಿ ಜಾಗವಿದ್ದು, ಮಾರುಕಟ್ಟೆಗೆ ವರದಿ ನೀಡಿದರೆ ಸರ್ಕಾರಕ್ಕೆ ಕಳುಹಿಸಲಾಗುವುದು ಎಂದರು.

ಓಣಿಯೊಂದರಲ್ಲಿ ಕಸಾಯಿಖಾನೆಯಿಂದ ತೊಂದರೆಯಾಗುತ್ತಿದ್ದು, ಜನರು ಈ ಬಗ್ಗೆ ದೂರಿದ್ದಾರೆ. ಆದ್ದರಿಂದ ಕಸಾಯಿಖಾನೆಯನ್ನು ಸ್ಥಳಾಂತರ ಮಾಡಿ ಎಂದು ಸೂಚನೆ ನೀಡಿದರು. ಹೀಗೆಯೇ ಪಟ್ಟಣಕ್ಕೆ ಸಂಬಂಧಿಸಿದಂತೆ ಅಭಿವೃದ್ಧಿ ಕಾಮಗಾರಿಗಳ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ ಸಲಹೆ, ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿ ವಿ ಜಿ ಅಂಗಡಿ, ಸದಸ್ಯರು, ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬೇಡ್ತಿ ನಾಲಾ ಪ್ರದೇಶಕ್ಕೆ ಸಚಿವರ ಭೇಟಿ

ಕಲಘಟಗಿ ತಾಲೂಕಿನ ಬೆಲವಂತರ ಗ್ರಾಮದ ಹತ್ತಿರ ಹೊಸದಾಗಿ ನಿರ್ಮಿಸಲಾಗುತ್ತಿರುವ ಕೆರೆ ತುಂಬಿಸುವ ನೀರಾವರಿ ಯೋಜನೆ (ಬೇಡ್ತಿ ನಾಲಾ) ಸ್ಥಳಕ್ಕೆ ಭೇಟಿ ನೀಡಿದ್ದ ಸಚಿವ ಸಂತೋಷ್ ಲಾಡ್ ಅವರು ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು.

ಈಗಾಗಲೇ ಕಾಮಗಾರಿ ಮುಕ್ತಾಯವಾಗಿದ್ದು, ಆಗಸ್ಟ್ ತಿಂಗಳಲ್ಲಿ ಮುಖ್ಯಮಂತ್ರಿಯವರಿಂದ ಉದ್ಘಾಟನೆ ಮಾಡಲು ಸಿದ್ಧತೆ ನಡೆಸಲಾಗಿದೆ ಎಂದು ಹೇಳಿದರು. ಈ ವೇಳೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳು, ರೈತರು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಉಪಮುಖ್ಯಮಂತ್ರಿ ಕುರ್ಚಿ ಮೇಲೆ ಕಣ್ಣಿಟ್ಟ ಸಚಿವರಾರು?

ಪುಟ 1ರಿಂದ

ಸರ್ಕಾರದಲ್ಲಿ ಏಕ ಮಾತ್ರ ಡಿಸಿಎಂ ಎಂಬ ಅಲಿಖಿತ ನಿಯಮವಿದೆ. ಆದರೆ ಕೆ.ಎನ್. ರಾಜಣ್ಣ ಅವರು ಸಮುದಾಯವಾರು ಡಿಸಿಎಂ ಹುದ್ದೆ ಸೃಷ್ಟಿ ಮಾಡುವಂತೆ ಒತ್ತಾಯಿಸುತ್ತಿದ್ದಾರೆ. ಹಾಗೆಯೇ ಸತೀಶ್ ಜಾರಕಿಹೊಳಿ, ಜಮೀರ್ ಅಹಮದ್ ಬಹಿರಂಗವಾಗಿ ಮತ್ತು ಪರೋಕ್ಷವಾಗಿ ಬ್ಯಾಟ್ ಬೀಸುತ್ತಿದ್ದಾರೆ. ಕೆಲವರು ಮೂರು ಡಿಸಿಎಂ ಹುದ್ದೆ ಸೃಷ್ಟಿ ಬೇಡಿಕೆ ಇಡುತ್ತಿದ್ದರೆ, ಇನ್ನೂ ಕೆಲವರು ಐದು ಡಿಸಿಎಂ ಹುದ್ದೆ ಪರ ಬ್ಯಾಟಿಂಗ್ ಮಾಡುತ್ತಿದ್ದಾರೆ. ಈ ಮೂಲಕ ಎಲ್ಲ ಸಮುದಾಯಗಳು ಕಾಂಗ್ರೆಸ್ ಪರ ವಾಲಲಿವೆ ಎಂಬುದು ಅವರ ಅಭಿಪ್ರಾಯವಾಗಿದೆ. ಮುಂದಿನ ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆ ಯಲ್ಲೂ ಇದು ಪಕ್ಷಕ್ಕೆ ಅನುಕೂಲವಾಗಲಿದೆ. ಜೊತೆಗೆ ಪ್ರಾದೇಶಿಕವಾರು ಡಿಸಿಎಂ ಹುದ್ದೆ ಸೃಷ್ಟಿಸಿದರೆ ಪಕ್ಷ ಸಂಘಟನೆಗೆ ಶಕ್ತಿ ಬರಲಿದೆ ಎಂಬುದು ಕೆಲವರ ವಾದವಾಗಿದೆ.

ಡಿಸಿಎಂ ಹುದ್ದೆ ಮೇಲೆ ಕಣ್ಣಿಟ್ಟವರು ಯಾರು?: ಕೆಲ ಹಿರಿಯ ಸಚಿವರು ಡಿಸಿಎಂ ಹುದ್ದೆ ಮೇಲೆ ಕಣ್ಣಿಟ್ಟಿದ್ದಾರೆ. ಆಕಾಂಕ್ಷಿಗಳ ಪೈಕಿ ದಲಿತ ಸಮುದಾಯದ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಮುಂಚೂಣಿಯಲ್ಲಿದ್ದಾರೆ. ಇವರು ಪರೋಕ್ಷವಾಗಿ ಆಗಾಗ ತಮ್ಮ ಡಿಸಿಎಂ ಕನಸನ್ನು ವ್ಯಕ್ತಪಡಿಸುತ್ತಲೇ ಇದ್ದಾರೆ. ಸಚಿವ ಕೆ.ಎನ್. ರಾಜಣ್ಣ ಬಹಿರಂಗವಾಗಿ ತಮ್ಮ ಡಿಸಿಎಂ ಹುದ್ದೆಯ ಆಸೆಯನ್ನು ವ್ಯಕ್ತಪಡಿಸುತ್ತಿದ್ದಾರೆ. ಇನ್ನು, ಹಿಂದುಳಿದ ವರ್ಗದ ನಾಯಕರಾದ ಸಚಿವ ಸತೀಶ್ ಜಾರಕಿಹೊಳಿ ಡಿಸಿಎಂ ಹುದ್ದೆ ಮೇಲೆ ಬಹು ದಿನಗಳಿಂದ ಕಣ್ಣಿಟ್ಟಿದ್ದಾರೆ. ಈ ಸಂಬಂಧ ಬಹಿರಂಗವಾಗಿ ಈ ಮುಂಚೆ ತಮ್ಮ ಆಸೆಯನ್ನು ಹೊರಗೆಡವಿದ್ದಾರೆ. ಇವರ ಜೊತೆಗೆ ಲಿಂಗಾಯತ ಸಮುದಾಯದ ಸಚಿವ ಎಂ.ಬಿ. ಪಾಟೀಲ್ ಕೂಡ ಡಿಸಿಎಂ ಹುದ್ದೆಯ ಮೇಲೆ ಕಣ್ಣಿಟ್ಟಿರುವುದು ಗೌಪ್ಯವಾಗಿ ಉಳಿದಿಲ್ಲ. ಇತ್ತ ಅಲ್ಪಸಂಖ್ಯಾತ ಸಚಿವ ಜಮೀರ್ ಅಹಮದ್ ಖಾನ್ ಕೂಡ ಆಕಾಂಕ್ಷಿಯಾಗಿದ್ದಾರೆ.

ಡಿ.ಕೆ.ಸುರೇಶ್, ಪ್ರಿಯಾಂಕ್? ಖರ್ಗೆಯಿಂದ ಆಕ್ಷೇಪ: ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ ಬೇಡಿಕೆಗೆ ಮಾಜಿ ಸಂಸದ ಡಿ.ಕೆ. ಸುರೇಶ್ ಪರೋಕ್ಷವಾಗಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಎಲ್ಲಾ ಸಮುದಾಯಕ್ಕೂ ನ್ಯಾಯ ಸಿಗಲಿ. ಪಕ್ಷ ತೀರ್ಮಾನ ಮಾಡಿ ಇನ್ನೂ ಐದು ಜನರನ್ನು ಡಿಸಿಎಂ ಮಾಡಿದ್ರು ಒಳ್ಳೆದು. ಹೆಚ್ಚು ಬಾರಿ ಗೆದ್ದ ರಾಮಲಿಂಗಾ ರೆಡ್ಡಿ, ಈಶ್ವರ್ ಖಂಡ್ರೆ, ಸತೀಶ್ ಜಾರಕಿಹೊಳಿ, ಜಮೀರ್, ಕೃಷ್ಣ ಬೈರೇಗೌಡ, ಚಲುವರಾಯ ಸ್ವಾಮಿ, ದಿನೇಶ್ ಗುಂಡೂ ರಾವ್, ಆರ್.ವಿ. ದೇಶಪಾಂಡೆ ಇದ್ದಾರೆ. ಎಲ್ಲರನ್ನೂ ಮಾಡಲಿ ಯಾರು ಬೇಡ ಅಂದ್ರು ಎಂದು ಡಿ.ಕೆ. ಸುರೇಶ್ ವ್ಯಂಗ್ಯವಾಡಿದರು. ಈ ವಿಚಾರವಾಗಿ ಕಲಬುರಗಿಯಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಎಲ್ಲರಿಗೂ ಕೇಳುವ ಹಕ್ಕಿದೆ. ಆದರೆ ಹೈಕಮಾಂಡ್ ಬಳಿ ಹೋಗಿ ಕೇಳಲಿ, ಯಾರೂ ಬೇಡ ಅಂದಿಲ್ಲ. ಡಿಸಿಎಂ ಮಾಡುವುದರಿಂದಲೇ ಎಲ್ಲ ಆಗುತ್ತೆ ಅನ್ನೋದಾದ್ರೆ ಸಿಎಂನ ಮಾತ್ರ ಬಿಟ್ಟು ಇಡೀ ಕ್ಯಾಬಿನೆಟ್ ಡಿಸಿಎಂ ಆಗಲಿ, ಅಂದ್ರೆ ಆಗುತ್ತಾ?. ನಮ್ಮ ಕೆಲಸ ಏನು? ಚುನಾವಣೆಯಲ್ಲಿ ನಾಲ್ಕೈದು ಸ್ಥಾನ ಕಡಿಮೆ ಬಂದಿವೆ. ಅದರ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳಬೇಕು. ಸಿಎಂ ಹುದ್ದೆನೂ ಕೇಳಿ ಯಾರು ಬೇಡ ಅಂದೋರು ಎಂದು ಅಸಮಾಧಾನ ಹೊರಹಾಕಿದ್ದಾರೆ.

# ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ

ಪುಟ 1ರಿಂದ

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ, ಶಕ್ತಿ ಯೋಜನೆ, ಯುವನಿಧಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಯೋಜನೆಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ನಿರ್ದೇಶನ ನೀಡಿದರು.

ಐದು ಗ್ಯಾರಂಟಿ ಯೋಜನೆಗಳು ಜನತೆಗೆ ಮುಟ್ಟಿಸುವ ನಿಟ್ಟಿನಲ್ಲಿ ವಿವಿಧ ಹಂತಗಳಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಾರ್ಯನಿರ್ವಹಿಸಲಿದೆ. ಜಿಲ್ಲೆಗೆ ನೇಮಕವಾಗಿರುವ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರು,

ಉಪಾಧ್ಯಕ್ಷರು, ಸದಸ್ಯರಿಗೆ ಇಂದು ಸನ್ಮಾನಿಸಿ ಅಭಿನಂದನೆ ಸಲ್ಲಿಸಲಾಗಿದೆ. ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಕಾರ್ಯೋನ್ಮುಖರಾಗಲಿದ್ದಾರೆ ಎಂದರು.

ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರು ಮಾತನಾಡಿ ಸ್ವಾವಲಂಬಿ, ಸ್ವಾಭಿಮಾನ ಬದುಕು ಕಟ್ಟಿಕೊಳ್ಳಲು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳ ಅನುಷ್ಠಾನ ಹೇಗೆ ಸಾಗಿದೆ. ಏನಾದರು ಸಮಸ್ಯೆಗಳು ಇದೆಯೇ ಎಂಬ ಬಗ್ಗೆ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರು, ಸದಸ್ಯರು ಫಲಾನುಭವಿಗಳಿಗೆ ತೆರಳಿ ತಿಳಿಯಬೇಕು ಎಂದರು. ಬದುಕಿನಲ್ಲಿ ಭರವಸೆ, ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು.

ಮಾಸಿಕ ಆದಾಯ ಇಲ್ಲದ ಕುಟುಂಬಗಳಿಗೆ ನೆರವಾಗುವ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ದಿಸೆಯಲ್ಲಿ ಪ್ರಾಧಿಕಾರ ಮುಂದಾಗಬೇಕು. ಸರ್ಕಾರದ ಉದ್ದೇಶ ಯಶಸ್ಸುಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ ಅವರು ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷರಾದ ಹೆಚ್.ವಿ. ಚಂದ್ರು ಅವರು ಮಾತನಾಡಿ ಆರ್ಥಿಕವಾಗಿ ಹಾಗೂ ಹಿಂದುಳಿದ ಜನರ ಸಬಲೀಕರಣ ಮಾಡುವ ಉದ್ದೇಶ ಸರ್ಕಾರದ ಗ್ಯಾರಂಟಿ ಯೋಜನೆಗಳದ್ದಾಗಿದೆ.

ಇದರ ಮೇಲುಸ್ತುವಾರಿಗಾಗಿ ಅನುಷ್ಠಾನ ಸಮಿತಿ ತರಲಾಗಿದೆ. ಸಚಿವರು, ಶಾಸಕರು, ಅಧಿಕಾರಿಗಳ ಸಹಕಾರದೊಂದಿಗೆ ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ದುಡಿಯುವುದಾಗಿ ನುಡಿದರು.

ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು, ಜಿಲ್ಲೆಯಲ್ಲಿ ಯೋಜನೆಗಳಲ್ಲಿ ಆಗಿರುವ ಪ್ರಗತಿ ಮಾಹಿತಿಯನ್ನು ಸಭೆಗೆ ವಿವರಿಸಿದರು.

ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಂ.ಆರ್. ಮಂಜುನಾಥ್, ಹೆಚ್.ಎಂ, ಗಣೇಶ್ ಪ್ರಸಾದ್, ಸಿ.ಎನ್. ಮಂಜೇಗೌಡ, ಡಾ. ಡಿ. ತಿಮ್ಮಯ್ಯ, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ಚೂಡಾ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಮಲೆ ಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಸಂತೋಷ್ ಕುಮಾರ್, ಜಿಲ್ಲಾ ಮಟ್ಟದ ಇನ್ನಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರದಿಂದ "ಗ್ರಾ.ಪಂ ಕಾರ್ಯದರ್ಶಿ"ಗಳನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ನೇಮಿಸಿ ಆದೇಶ

ಬೆಂಗಳೂರು: ಗ್ರಾಮ ಪಂಚಾಯ್ತಿ ಕಾರ್ಯದರ್ಶಿಗಳು ಜನನ, ಮರಣ ಉಪ ನೋಂದಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುವಂತೆ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಈ ಕುರಿತಂತೆ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳು ಹಾಗೂ ಅಪರ ನಿರ್ದೇಶಕರು ಸುತ್ತೋಲೆ ಹೊರಡಿಸಿದ್ದು, ದೇಶಾದ್ಯಂತ ಜನನ, ಮರಣ ನೋಂದಣಿ ಅಧಿನಿಯಮ, 1969 ಜಾರಿಯಲ್ಲಿರುತ್ತದೆ.

ಕರ್ನಾಟಕ ಜನನ, ಮರಣಗಳ ನೋಂದಣಿ ನಿಯಮಗಳು, 1999ರ ಮೂಲಕ ಪುನರ್ ರಚಿತ ನಾಗರಿಕ ನೋಂದಣಿ ಪದ್ಮತಿಯನ್ನು ದಿನಾಂಕ: 01–01–2000 ರಿಂದ ರಾಜ್ಯಾದ್ಯಂತ ಏಕೀಕರಿಸಿ ಜನನ, ಮರಣ ನೋಂದಣಿಯನ್ನು ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ ಎಂದಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಲೆಕ್ಕಿಗರನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿರುತ್ತದೆ. ಗ್ರಾಮೀಣ ಪ್ರದೇಶದಲ್ಲಿ ನಾಗರಿಕ ನೋಂದಣಿ ಪದ್ಧತಿಯನ್ನು ಬಲಪಡಿಸಲು ಹಾಗೂ ಘಟಿಸುವ ಶೇ.100 ರಷ್ಟು ಜನನ, ಮರಣ ನೋಂದಣಿ ಘಟನೆಗಳನ್ನು ದಾಖಲಿಸಲು ಜನನ, ಮರಣ ನೋಂದಣಿ ಅಧಿನಿಯಮ 1969ರ ಪ್ರಕರಣ 7(5) ರನ್ವಯ ಜನನ, ಮರಣ ಘಟನೆಗಳು ಘಟಿಸಿದ ಮೂವತ್ತು ದಿನಗಳವರೆಗಿನ ಘಟನೆಗಳನ್ನು ನೋಂದಾಯಿಸಲು ಪಂಚಾಯಿತಿ ಕಾರ್ಯದರ್ಶಿಗಳನ್ನು ಜನನ, ಮರಣ ಉಪ ನೋಂದಣಾಧಿಕಾರಿಗಳನ್ನಾಗಿ ಹಾಗೂ ಪುಕರಣ 7(1) ರನ್ವಯ ಜನನ, ಮರಣ ಘಟನೆಗಳು ಸಂಭವಿಸಿದ ಮೂವತ್ತು ದಿನಗಳ ನಂತರದ ವಿಳಂಬ ನೋಂದಣಿಯನ್ನು ನೋಂದಾಯಿಸಲು ಗ್ರಾಮ ಆಡಳಿತ ಅಧಿಕಾರಿಗಳನ್ನು ಜನನ, ಮರಣ ನೋಂದಣಾಧಿಕಾರಿಗಳನ್ನಾಗಿ ಉಲ್ಲೇಖಿತ (3) ರಲ್ಲಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಸದರಿ ಆದೇಶದನ್ವಯ ಜನನ, ಮರಣ ನೋಂದಣಿಗೆ ಸಂಬಂಧಿಸಿದಂತೆ, ನೋಂದಣಾಧಿಕಾರಿಗಳು ಮತ್ತು ಉಪ ನೋಂದಣಾಧಿಕಾರಿಗಳ ಪಾತ್ರ ಜವಾಬ್ದಾರಿ ಹಾಗೂ ನಿರ್ವಹಿಸಬೇಕಾದ ಕಾರ್ಯಗಳ ಕುರಿತ ಮಾರ್ಗಸೂಚಿಯನ್ನು ಒಳಗೊಂಡ ಪ್ರಮಾಣಿತ ಕಾರ್ಯಾಚರಣೆಯ ವಿಧಾನಗಳನ್ನು ಉಲ್ಲೇಖ(4) ರಲ್ಲಿ ಹೊರಡಿಸಲಾಗಿರುತ್ತದೆ ಎಂದು ಹೇಳಿದ್ದಾರೆ.

ದಿನಾಂಕ. 01.07.2024 ರಿಂದ ಜಾರಿಗೆ ಬರುವಂತೆ ಉಲ್ಲೇಖ (3)ರ ಸರ್ಕಾರದ ಆದೇಶವನ್ನು ಗ್ರಾಮೀಣ ಪುದೇಶಕ್ಕೆ ಅನ್ವಯವಾಗುವಂತೆ



ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಕೆಳಕಂಡ ಅಂಶಗಳನ್ನು ಪಾಲಿಸಲು ತಿಳಿಸಿದೆ.

1. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಘಟಿಸುವ ಜನನ, ಮರಣ ಘಟನೆಗಳು ಸಂಭವಿಸಿದ 30 ದಿನಗಳೊಳಗೆ ಜನನ, ಮರಣ ಉಪ ನೋಂದಣಾಧಿಕಾರಿಗಳಾದ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ನಿಯಮಾನುಸಾರ ನೋಂದಣಿ ಮಾಡತಕ್ಕದ್ದು.

a. ಘಟನೆ ಸಂಭವಿಸಿದ 21 ದಿನಗಳೊಳಗೆ ಜನನ, ಮರಣ ಘಟನೆಗಳನ್ನು ನೋಂದಣಿ ಮಾಡಿ ಉಚಿತವಾಗಿ ಒಂದು ಪುಮಾಣ ಪತ್ರವನ್ನು ವಿತರಿಸುವುದು.

b. ಕರ್ನಾಟಕ ಜನನ, ಮರಣ ನೋಂದಣಿ ನಿಯಮ 5ರಲ್ಲಿ ನಿಗದಿಪಡಿಸಿದ 21 ದಿನಗಳ ತರುವಾಯ ಮತ್ತು 30 ದಿನಗಳೊಳಗಾಗಿ ವರದಿಯಾಗುವ ಘಟನೆಗಳನ್ನು ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ 9(1) ರ ಪುಕಾರ ರೂ.2/– ತಡ ಶುಲ್ಕ ಪಡೆದು ನೋಂದಾಯಿಸುವುದು.

c. ಘಟನೆ ಸಂಭವಿಸಿದ 30 ದಿನಗಳ ತರುವಾಯ ವರದಿಯಾಗುವ ಘಟನೆಗಳ ನೋಂದಣಿಯನ್ನು ಮಾಡತಕ್ಕದ್ದಲ್ಲ. ಸದರಿ ಘಟನೆಗಳ ನೋಂದಣಿಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಬೇಕಾಗಿರುವ ಹಿನ್ನೆಲೆಯಲ್ಲಿ ಕುರಿತಂತೆ ಸಾರ್ವಜನಿಕರಿಗೆ/ ಅರ್ಜಿದಾರರಿಗೆ ಮಾಹಿತಿಯನ್ನು ನೀಡುವುದು.

2. ಜನನ, ಮರಣ ಘಟನೆ ಸಂಭವಿಸಿದ 30 ದಿನಗಳ ನಂತರ ವರದಿಯಾಗುವ ಘಟನೆಗಳನ್ನು ಜನನ, ಮರಣ ನೋಂದಣಾಧಿಕಾರಿಗಳಾದ ಗ್ರಾಮ ಆಡಳಿತ ಅಧಿಕಾರಿಗಳು ನಿಯಮಾನುಸಾರ ಈ ಕೆಳಕಂಡಂತೆ ನೋಂದಣಿ ಮಾಡತಕ್ಕದ್ದು.

a. ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ ನಿಯಮ 9(2) ರ ಪ್ರಕಾರ 30 ದಿನಗಳ ತರುವಾಯ ಒಂದು ವರ್ಷದ ಒಳಗೆ ವರದಿಯಾಗುವ ಜನನ,ಮರಣ ಹಾಗೂ ನಿರ್ಜೀವ ಜನನಗಳನ್ನು ತಹಶೀಲ್ದಾರರ ಲಿಖಿತ ಅನುಮತಿಯೊಂದಿಗೆ ರೂ.5/– ತಡೆ ಶುಲ್ಕ ಪಡೆದು ನೋಂದಾಯಿಸುವುದು

b. ಕರ್ನಾಟಕ ಜನನ, ಮರಣ ನೋಂದಣಿ ನಿಯಮಗಳು 1999ರ ನಿಯಮ 9(3) ರ ಪ್ರಕಾರ ಒಂದು ವರ್ಷದ ನಂತರ ವರದಿಯಾಗುವ ಜನನ, ಮರಣ ಘಟನೆಗಳಿಗೆ ವಿಳಂಬ ನೋಂದಣಿ ಮಾಡಲು ಮೊದಲನೇ ವರ್ಗದ ದಂಡಾಧಿಕಾರಿ ಅಥವಾ ಮಹಾ ಪ್ರಾಂತ ದಂಡಾಧಿಕಾರಿ (Presidency Magistrate) ರವರ ಆದೇಶದೊಂದಿಗೆ ರೂ.10/– ತಡೆ ಶುಲ್ಕ ಪಡೆದು ನೋಂದಾಯಿಸುವುದು.

ಜನನ, ಮರಣ ನೋಂದಣಿ ಸಂಬಂಧ ಯಾವುದಾದರೂ ಸಂದೇಹ/ಸ್ಪಷ್ಟಿಕರಣ ಅವಶ್ಯಕತೆ ಇದ್ದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಹಾಗೂ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸುವುದು.

ಜನನ, ಮರಣ ಮತ್ತು ನಿರ್ಜೀವ ಜನನಗಳ ನೋಂದಣಿ ಮಾಡುವ ಸಂದರ್ಭದಲ್ಲಿ ಇ–ಜನ್ಮ ತಂತ್ರಾಂಶದಲ್ಲಿ ತಾಂತ್ರಿಕ ಸಮಸ್ಯೆಗಳು ಕಂಡು ಬಂದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಛೇರಿ ಅಥವಾ ಇ–ಜನ್ಮ ಸಹಾಯವಾಣಿ ಹಾಗೂ ಇ–ಮೇಲ್ crbdkar@gmail.com / ejanmahelpdesk@gmail.com ಮತ್ತು ದೂರವಾಣಿ 1800–425–6578 ಕ್ಕೆ ಸಂಪರ್ಕಿಸುವುದು.

ಜನನ, ಮರಣ ನೋಂದಣಿ ಸಂಬಂಧ ಭಾರತದ ಮಹಾ ನೋಂದಣಾಧಿಕಾರಿಗಳು / ರಾಜ್ಯದ ಜನನ, ಮರಣಗಳ ಮುಖ್ಯ ನೋಂದಣಾಧಿಕಾರಿಗಳು ಕಾಲಕಾಲಕ್ಕೆ ಹೊರಡಿಸುವ ಸುತ್ತೋಲೆ / ಆದೇಶ / ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸುವಂತೆ ಸೂಚಿಸಿದ್ದಾರೆ.

# ಭಾರತೀಯ ಸಂಸ್ಕೃತಿಯಲ್ಲಿ ಅಕ್ಷರಾಭ್ಯಾಸ ಗುರುಕುಲದ ಪದ್ದತಿ

ಕೊರಟಗೆರೆ :–– ಭಾರತೀಯ ಸಂಸ್ಕೃತಿಯಲ್ಲಿ ಅಕ್ಷರಾಬ್ಯಾಸ ಗುರುಕುಲದ ಪದ್ದತಿಯಾಗಿದ್ದು ಮಕ್ಕಳ ಮೊದಲ ಕಲಿಕೆಗೆ ಮಹತ್ವದಾಗಿದೆ ಅದಕ್ಕಾಗಿ ಮಕ್ಕಳ ತಂದೆತಾಯಿಗಳು ಅಕ್ಷರಾಬ್ಯಾಸದ ಪರಂಪರೆಯನ್ನು ಮುಂದುವರೆಸಬೇಕು ಎಂದು ಶ್ರೀ ಕ್ಷೇತ್ರ ಸಿದ್ದರಬೆಟ್ಟದ ಶ್ರೀ ವೀರಭದ್ರಶಿವಾಚಾರ್ಯಸ್ವಾಮೀಜಿ ತಿಳಿಸಿದರು.



ಅವರು ಕೊರಟಗೆರೆ ಪಟ್ಟಣದ ಚಾಣುಕ್ಯ ಪಬ್ಲಿಕ್ ಸ್ಕೂಲ್‌ನಲ್ಲಿ ಏರ್ಪಡಿಸಿದ್ದ ಅಂಕುರ–2024 ರಲ್ಲಿ ದಾಖಲಾದ ಮಕ್ಕಳಿಗೆ ಅಕ್ಷಾರಭ್ಯಾಸ ಕಾರ್ಯವನ್ನು ಧಾರ್ಮಿಕತೆ ಮೂಲಕ ಮಾಡಿಸಿ ಮಾತನಾಡಿ ಭಾರತೀಯ ಸಂಸ್ಕೃತಿಯು ಪ್ರಪಂಚದಲ್ಲಿಯೆ ಪುರಾತನ ಸಂಸ್ಕೃತಿಯಾಗಿದೆ ಹಿಂದೆ ಮಕ್ಕಳ ವಿದ್ಯಾಭ್ಯಾಸವು ಗುರುಕುಲಗಳಲ್ಲಿ ಪ್ರಾರಂಭವಾಗುತ್ತಿತ್ತು ಆ ಗುರುಕುಲದಲ್ಲಿ ಮಕ್ಕಳ ವಿದ್ಯಾಭ್ಯಾಸವನ್ನು ಅಕ್ಷಾರಭ್ಯಾಸದ ಮೂಲಕ ಪ್ರಾರಂಭಿಸುತ್ತಿದ್ದರು, ಭಾರತೀಯ ಸಂಸ್ಕೃತಿಯ 16 ಸಂಸ್ಕಾರಗಳಲ್ಲಿ ಅಕ್ಷರಾಭ್ಯಾಸವು ಒಂದಾಗಿದೆ, ಇಂದು ಚಾಣಕ್ಯ ಪಬ್ಲಿಕ್ ಶಾಲೆಯಲ್ಲಿ ಅಂಕುರ ಎನ್ನುವ ಕಾರ್ಯಕ್ರಮದ ಮೂಲಕ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಲಾಗುತ್ತಿದೆ, ಈ ಮೂಲಕ ಮಕ್ಕಳ ಭವಿಷ್ಯ ಉಜ್ವಲವಾಗಬೇಕು ಅವರ ಸಂಕಲ್ಪಗಳು ಈಡೇರಬೇಕು ಮಕ್ಕಳು ಅವರ ಕುಟುಂಬಕ್ಕೆ ತಂದೆತಾಯಿಗಳಾಗಿ ದೇಶಕ್ಕೆ ಒಳ್ಳೆಯ ಪ್ರಜೆಗಳಾಗಬೇಕು ಎಂದು ಅಕ್ಷರಾಭ್ಯಾಸ ಮಾಡುಸಲಾಗಿದೆ ಎಂದರು.

ಸಮಾಜದಲ್ಲಿ ತಂದೆ ತಾಯಿಗಳು ತಮ್ಮ ಮಕ್ಕಳ ವಿದ್ಯಾಭ್ಯಾಸದ ಜೊತೆಗೆ ಮನೆಯಲ್ಲಿ ಅವರಿಗೆ ಒಳ್ಳೆಯ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಹೇಳಿಕೊಡಬೇಕು, ಆಗ ಮಕ್ಕಳು ಸಮಾಜಕ್ಕೆ ಸೇವೆಯನ್ನು ಕೊಡಿಗೆಯನ್ನು ನೀಡುವ ವ್ಯಕ್ತಿಗಳಾಗುತ್ತಾರೆ ಹಾಗೂ ಭವ್ಯ ಭಾರತದ ಉತ್ತಮ ಪ್ರಜೆಗಳಾಗುತ್ತಾರೆ, ವಿದ್ಯೆಗೆ ವಿನಯವೇ ಭೂಷಣವಾಗಿದ್ದು ನಮ್ಮ ಹಿಂದಿನ ಪರಂಪರೆ ಆಚರಣೆಗಳು ಒಂದೊಂದು ಮಹತ್ವ ಪಡೆದಿವೆ, ನಮ್ಮ ಸಂಸ್ಕೃತಿಯ ಮಹತ್ವ ವನ್ನು ತಿಳಿದು ವಿದೇಶಿಯರು ಅದನ್ನ ಆಚರಿಸುತ್ತಿದ್ದಾರೆ ಭಾರತೀಯರಾದ ನಾವುಗಳು ಅದನ್ನು ಮರೆಯುತ್ತಿದ್ದೇವೆ ಅಕ್ಷರಾಭ್ಯಾಸ ನಮ್ಮ ಸಂಸ್ಕಾರದ ಒಂದು ಭಾಗ ನಮ್ಮ ಪರಂಪರೆ ಇದಕ್ಕೆ ಯಾವುದೇ ಜಾತಿ ಮತ ಬಡವ ಶ್ರೀಮಂತ ಭೇದವಿಲ್ಲ ಎಂದರು.

ಶಾಲಾ ಆಡಳಿತ ಮಂಡಲಿಯ ನರಸಿಂಹಲುಬಾಬು ಮಾತನಾಡಿ ನಮ್ಮ ಶಾಲೆಯಲ್ಲಿ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ನೀಡುವುದರೊಂದಿಗೆ ನಮ್ಮ ದೇಶದ ಸಂಸ್ಕೃತಿ ಸಂಸ್ಕಾರವನ್ನು ಕಲಿಸಲಾಗುತ್ತಿದೆ, ಈ ಭಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆ ನಮ್ಮ ಶಾಲೆಯ ವಿದ್ಯಾರ್ಥಿ ತಾಲ್ಲೂಕಿಗೆ ಪ್ರಥಮ, ವಿದ್ಯಾರ್ಥಿನಿ ತಾಲ್ಲೂಕಿಗೆ ದ್ವಿತೀಯ ಹಾಗೂ ಅತಿ ಹೆಚ್ಚು ಡಿಸ್ಟಿಂಕ್ಸನ್ ಫಲಿತಾಂಶ ಪಡೆದ ಶಾಲೆಯಾಗಿದ್ದು ಉತ್ತಮ ಶಿಕ್ಷಕರ ಹಾಗೂ ಅಡಳಿತ ಮಂಡಳಿ ಪರಿಶ್ರಮದಿಂದ ಈ ಸಾಧನೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಾರದಾ ಪೂಜೆಯನ್ನು ನೆರವೇರಿಸಲಾಯಿತು ಪ್ರಥಮ ವರ್ಷದ ಧಾಖಲಾದ ಪುಟ್ಟ ಮಕ್ಕಳಿಂದ ಅ,ಆ ಅಕ್ಷರ ಮತ್ತು ಅಪ್ಪ ಅಮ್ಮ ಎಂದು ಶ್ರೀ ವೀರಭದ್ರಶಿವಾಚಾರ್ಯಸ್ವಾಮೀಜಿ ಬರೆದರು ಈ ಸಂದರ್ಭದಲ್ಲಿ ಆಡಳಿತ ಮಂಡಲಿಯ ಸಿ.ಎಸ್.ಹನುಮಂತರಾಜು, ಆರ್.ಪಿ.ರವಿಕುಮಾರ್, ವಿಜಯಕುಮಾರ್ ಸೇರಿದಂತೆ ಶಾಲೆಯ ಎಲ್ಲಾ ಶಿಕ್ಷಕರು ಭಾಗವಹಿಸಿದ್ದರು.

# ಸಮಾಜ ಕಲ್ಯಾಣ ಇಲಾಖೆ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿದರು

ಮುದ್ದೇಬಿಹಾಳ: ಪಟ್ಟಣದ ತಾಲೂಕಾ ಸಮಾಜ ಕಲ್ಯಾಣ ಇಲಾಖೆಯಲ್ಲಿ ಪ್ರಥಮ ದರ್ಜೆಸರಕಾರಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ




ಶೋಭಾ ಬೈರಗೊಂಡ ಎನ್ನುವರು ಅಥೆ ಕಚೇರಿಯಲ್ಲಿ ಸಿಪಾಯಿ ಎಂದು ದಿನಗೂಲಿ ನೌಕರರಳಾಗಿ ಸೇವೆ ಸಲ್ಲಿಸುತ್ತಿರುವ ಇವರ ಮೇಲೆ ಜಾತಿ ನಿಂದನೆ ಮಾಡಿ ಮಾತನಾಡುತ್ತಿದ್ದು ಈ ಹಿನ್ನೆಲೆಯಲ್ಲಿ ಶೋಭಾ ಬೈರಗೊಂಡ ಅವರನ್ನು ಅಮಾನತ್ತು ಮಾಡಿ ಬೆರೆಡೆಗೆ ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿ ಇಲ್ಲಿನ ತಾಲೂಕಾ ವಿವಿಧ ದಲಿತಪರ ಸಂಘಟನೆ ಮುಖಂಡರು ಹಾಗೂ ಕಾರ್ಯಕರ್ತರು ಸಮಾಜ ಕಲ್ಯಾಣ ಇಲಾಖೆ ಕಚೇರಿ ಎದುರು ಧರಣಿ ಸತ್ಯಾಗ್ರ ಹ ನಡೆಸುವ ಮೂಲಕ ಎಚ್ಚರಿಸಿದರು.

ಈ ವೇಳೆ ದಲಿತ ಮುಖಂಡ ಹರೀಶ ನಾಟೀಕಾರ ಅವರು ಮಾತನಾಡಿ ಸಮಾಜ ಕಲ್ಯಾಣ ಇಲಾಖೆಯ ಪ್ರಥಮ ದರ್ಜೆ ಸರಕಾರಿ ನೌರಕರಸ್ತೆಯಾದ ಶೋಭಾ ಬೈರಗೊಂಡ ಅವಾಚ್ಛ ಶಬ್ಧಗಳಿಂದ ಬೈದು ಜಾತಿ ನಿಂದನೆ ಮಾಡಿ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುವ ಭಾರತಿ ಮಾದರ ಎನ್ನುವ ದಿನಗೂಲಿ ನೌಕರರನ್ನು ಜಾತಿ ಎತ್ತಿ ಬೈದದ್ದು ಮಾತ್ರವಲ್ಲದೇ ಹೆದರಿಸುವುದು ಬೆದರಿಸುವುದು ಮಾಡುತ್ತಿದ್ದಾರೆ ಎಂದು ದೂರ ಕೇಳಿಬಂದ ತಕ್ಷಣವೇ ನಮ್ಮೇಲ್ಲ ದಲಿತ ಮುಖಂಡರು ನಾಯಕರು ಸೇರಿಕೊಂಡು ಕಚೇರಿಗೆ ತೆರಳಿ ಬುದ್ಧಿವಾದಗಳನ್ನು ಹೇಳಿ ಮುಂದೆ ಹೀಗಾಗದಂತೆ ನೋಡಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಲಾಗಿತ್ತು.

ಆದರೇಶೋಭಾ ಬೈರಗೊಂಡ ಅವರು ನಮ್ಮ ಮನವಿಗೆ ಸಹಕಾರಕ್ಕೆ ಸ್ಪಂದಿಸದೇ ಮತ್ತೆ ತಮ್ಮ ಹಳೆ ಚಾಲಿಯನ್ನೇ ಮುಂದುವರೆಸಿಕೊಂಡುನಿತ್ಯ ಅವಾಚ್ಛ ಶಬ್ಧಗಳಿಂದ ನಿಂದಿಸುವುದು ನಿಲ್ಲಿಸಿಲ್ಲ ಇದರಿಂದಾಗಿ ದಿನಗೂಲಿಯಾಗಿ ಸೇವೆ ಸಲ್ಲಿಸುತ್ತಿರುವ ಭಾರತಿ ಮಾದರ ಅವರು ಮಾನಸಿಕವಾಗಿ ತೊಂದರೆ ಅನುಭವಿಸುವಂತಾಗಿದೆ. ಈ ನಿಟ್ಟಿನಲ್ಲಿ ಸೋಮವಾರ ಧೀಡೀರ ಧರಣಿ ಸತ್ಯಾಗ್ರಹ ನಡೆಸುವುದು ಅನಿವಾರ್ಯಗಿದೇ ಎಂದರು.

ಈ ವೇಳೆ ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಕಚೇರಿಯ ಮಾನೇಜರ ಎಸ್ ಟಿ ಪೂಜಾರಿಯವರು ಧರಣಿ ನಿರತರ ಬಳಿ ತೆರಳಿ ಬೇಟಿ ನೀಡಿ ಸಮಸ್ಯೆ ಆಲಿಸಿ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ, ಸಧ್ಯ ಒಂದು ವಾರದೊಳಗಾಗಿ ಪ್ರಥಮ ದರ್ಜೆ ನೌಕರಳಾದ ಶೋಭಾ ಬೈರಗೊಂಡ ಅವರನ್ನು ಬೇರೆಕಡೆಗೆ ವರ್ಗಾವಣೆ ಮಾಡಲಾಗುವುದು ಎಂದು ಮೇಲಾಧಿಕಾರಿಗಳ ಲಿಖಿತ ಆದೇಶ ಮಾಡಿದ್ದಾರೆ ಕಾರಣ ಧರಣಿ ಕೈಡುವಂತೆ ಮನೋಲಿಸಿದ ಪರಿಣಾಮ ಧರಣಿ ನಿರತ ಮುಖಂಡರು ಧರಣಿಯನ್ನು ಕೈಬಿಟ್ಟು ನಮ್ಮ ಬೇಡಿಕೆಯಂತೆ ಮೇಲಾಧಿಕಾರಿಗಳ ಆದೇಶಕ್ಕೆ ತಲೆಬಾಗಿ ಸಧ್ಯ ಧರಣಿಯಿಂದ ಹಿಂದೆ ಸರಿದಿದ್ದೇವೆ ಆದರೇ ಒಂದುವಾರದೊಳಗಾಗಿ ಅಧಿಕಾರಿಗಳನ್ನು ವರ್ಗಾವಣೆ ಮಾಡದೇ ಹೋದರೆ ಆಗ ಯಾರ ಮಾತು ಕೇಳುವುದಿಲ್ಲ ತಾಲೂಕಿನಾಧ್ಯಂತ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ದಲಿತ ಮುಖಂಡರಾದ ಪ್ರಶಾಂತ ಕಾಳೆ, ಪ್ರಕಾಶ ಸರೂರ ಬಸವರಾಜ ಚಲವಾದಿ, ದೇವರಾಜ ಹಂಗರಗಿ, ಪರುಶುರಾಮ ನಾಲತವಾಡ, ಮಹಾಂತೇಶ ಕಂದಗನೂರ, ಮಂಜುನಾಥ ಅರಸನಾಳ, ಸಿದ್ದು ಚಲವಾದಿ ಸೇರಿದಂತೆ ಹಲವರು ಇದ್ದರು.

# ಅಂತರಗಂಗಾ ವಿದ್ಯಾಸಂಸ್ಥೆ ಯಲ್ಲಿ ನರಗುಂದ ಪಿರ್ಯೋತೆರಪಿ ಕಾಲೇಜಿನಿಂದ ವಿಶ್ವ ಪಿರ್ಯೋತೆರಪಿ ದಿನಾಚರಣೆ



ಕೋಲಾರ: ನಗರದ ಹೊರವಲದಲ್ಲಿರುವ ಅಂತರಗಂಗಾ ವಿದ್ಯಾ ಸಂಸ್ಥೆಯಲ್ಲಿ ಬೆಂಗಳೂರಿನ ನರಗುಂದ ಪಿರ್ಯೋತೆರಪಿ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಪ್ರಾಂಶುಪಾಲರು ಆಗಮಿಸಿ ಗಿಡಕ್ಕೆ ನೀರು ಹಾಕುವ ಮೂಲಕ ಪಿರ್ಯೋತೆರಪಿ ಶಿಭಿರವನ್ನು ಉದ್ಘಾಟನೆ ಮಾಡಿದರು.

ಈ ಸಂದರ್ಭದಲ್ಲಿ ಡಾ. ಶಿವಣ್ಣ ಅವರು ಮಾತನಾಡಿ ಯಾವ ಸಂದರ್ಭದಲ್ಲಿ ಯಾವೆಲ್ಲ ಚಿಕಿತ್ಸೆ ಗಳನ್ನು ತೆಗೆದುಕೊಳ್ಳಬೇಕು ಹಾಗೂ ಅಮ್ಮ ಮತ್ತು ತಾಯಿಗೆ ಇರುವಂತಹ ವ್ಯತ್ಯಾಸವನ್ನು ಸವಿವರಾವಾಗಿ ವಿವರಿಸಿ ಒಬ್ಬ ಮಗುವಿಗೆ ಜನ್ಮ ನೀಡುವವರು ತಾಯಿ ಯಾಗಿರುತ್ತಾರೆ ಮತ್ತು ಜನ್ಮದ ನಂತರ ಪ್ರೀತಿ ಸಹನೆ ಜವಾಬ್ದಾರಿಯನ್ನು ನೋಡಿಕೊಳ್ಳುವವರು ತಾಯಿ ಎಂದು ಮಗುವಿನ ಜನನದ ಸಂದರ್ಭದಲ್ಲಿ ಬೇಕಾದಂತಹ ಮುಂಜಾಗ್ರತಾ ಕ್ರಮಗಳನ್ನು ತಿಳಿಸಿಕೊಟ್ಟರು.

ವೃದ್ಧರ ಫಿಸಿಯೋಥೆರಪ ಆರೋಗ್ಯದ ಸುಧಾರಣೆ: ವೃದ್ಧರು ಹೆಚ್ಚಿನ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಾರೆ. ಫಿಸಿಯೋಥೆರಪಿ ಅವರ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.ಚಲನೆ ಮತ್ತು ಸ್ವಾಯತ್ತತೆಯನ್ನು ಬೃಹತ್: ವೃದ್ಧರಿಗೆ ಚಲನೆ ಸಮಸ್ಯೆ ಉಂಟಾಗಬಹುದು. ಫಿಸಿಯೋಥೆರಪಿ ಚಲನೆಯ ಶಕ್ತಿಯನ್ನು ಹೆಚ್ಚಿಸುತ್ತದೆ.ನೋವು ನಿರ್ವಹಣೆ: ಹಳೆಯ ವಯಸ್ಸಿನಲ್ಲಿ ಸಾಮಾನ್ಯವಾಗಿ ನೋವುಗಳು ಉಂಟಾಗಬಹುದು. ಫಿಸಿಯೋಥೆರಪಿ ಇದರ ನಿರ್ವಹಣೆಗೆ ಸಹಾಯ ಮಾಡುತ್ತದೆ. ಸಮನ್ವಯ ಮತ್ತು ಬಲವನ್ನು ಹೆಚ್ಚಿಸುವುದು: ಬಿದ್ದು ಹೋಗುವುದರಿಂದ ಸಂಭವಿಸುವ ಅಪಾಯವನ್ನು ತಗ್ಗಿಸಲು ಫಿಸಿಯೋಥೆರಪಿ ಸಹಾಯ ಮಾಡುತ್ತದೆ.

ಫಿಸಿಯೋಥೆರಪ ಶಾರೀರಿಕ ಅಭಿವೃದ್ಧಿ: ಮಕ್ಕಳ ಶಾರೀರಿಕ ಬೆಳವಣಿಗೆಗೆ ಮತ್ತು ಬೆಳವಣಿಗೆಗೆ ಫಿಸಿಯೋಥೆರಪಿ ಸಹಾಯ ಮಾಡುತ್ತದೆ. ಚಲನೆಯ ಶಕ್ತಿ ಮತ್ತು ಸಮತೋಲನ: ಮಕ್ಕಳ ಚಲನೆ, ಸಮತೋಲನ ಮತ್ತು ಸಾಮರ್ಥ್ಯವನ್ನು ಹೆಚ್ಚಿಸಲು ಫಿಸಿಯೋಥೆರಪಿ ಮುಖ್ಯವಾಗಿದೆ.

ವಿಶೇಷ ಆರೋಗ್ಯ ಸಮಸ್ಯೆಗಳು: ಹೆಚ್ಚಾಗಿ ಮಕ್ಕಳಿಗೆ ಇರುವ ಸ್ವಲ್ಪ ವಿಶೇಷ ಸಮಸ್ಯೆಗಳ ಪರಿಹಾರಕ್ಕೆ ಫಿಸಿಯೋಥೆರಪಿ ಸಹಾಯ ಮಾಡುತ್ತದೆ.

ಡಾ. ಕೆ.ಎಸ್.ಶಂಕರ್ ಅವರು ಮಾತನಾಡಿ ವಿಶ್ವ ಪಿರ್ಯೋತೆರಪಿ ದಿನಾಚರಣೆಯನ್ನು ನಮ್ಮ ಅಂತರಗಂಗಾ ಬುದ್ಧಿಮಾಂದ್ಯ ಮತ್ತು ವೃದ್ಧಾಶ್ರಮದಲ್ಲಿ ಶಿಭಿರವನ್ನು ಆಯೋಜಿಸುವುದರ ಮೂಲಕ ಮಾಡುತ್ತಿರುವುದರಿಂದ ನರಗುಂದ ಪಿರ್ಯೋತೆರಪಿ ಕಾಲೇಜಿನ ಪ್ರಾಂಶುಪಾಲರಿಗೆ ಮತ್ತು ವಿದ್ಯಾರ್ಥಿಗಳಿಗೆ ಅಭಿನಂದಿಸಿದರು. ನರಗುಂದ ಪಿರ್ಯೋತೆರಪಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಜಿ.ಬಾಲಾಜಿ ಅವರು ಮಾತನಾಡಿ ನಮ್ಮ ಕಾಲೇಜಿನ ವತಿಯಿಂದ ಪ್ರತಿ ತಿಂಗಳು ಇಂತಹ ಶಿಭಿರಾಗಳನ್ನು ಆಯೋಜನೆ ಮಾಡುತ್ತಿರುತ್ತೇವೆ ಅದರಂತೆ ಈ ಬಾರಿ ಕೋಲಾರದ ಅಂತರ ಗಂಗಾ ವಿದ್ಯಾಸಂಸ್ಥೆಯಲ್ಲಿ ಆಯೋಜನೆ ಮಾಡಿರುವುದು ನಮಗೂ ಸಂತೋಷದ ವಿಷಯ ಸಂಸ್ಥೆಯಲ್ಲಿರುವ ಪ್ರತಿಯೊಬ್ಬ ವಿದ್ಯಾರ್ಥಿಗಳಿಗೂ ಪಿರ್ಯೋತೆರಪಿ ಮಾಡಿ ಬೇಕಾದಂತಹ ಆಯಾಮಗಳನ್ನು ಹೇಳಿಕೊಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಅಂತರಗಂಗಾ ವಿದ್ಯಾ ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಡಾ. ಕೆ.ಎಸ್ ಶಂಕರ್, ನಿರ್ದೇಶಕರಾದ ರಾದಮ್ಮ, ವೆಂಕಟೇಶಪ್ಪ, ಸಿಇಓ ಪ್ರಜ್ಞಾ,ವಿಧಾನಸೌಧ ಶಾಖಾಧಿಕಾರಿ ಮಂಜುನಾಥ್,ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಹರೀಶ್,ಸೇರಿದಂತೆ ಸಂಸ್ಥೆಯ ಸಿಬ್ಬಂದಿ ಇದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ

ಸಾಗರ ಪಟ್ಟಣದ ಲಾಲ್ ಬಹದ್ದೂರ್ ಶಾಸ್ತ್ರಿ ಕಾಲೇಜ್ 4ನೇ ಸೇಮಿಸ್ಟರ್ ವಿದ್ಯಾರ್ಥಿ ಅನುಷಾ (22) ಶನಿವಾರ ಕಾಲೇಜ್ ಪುರೈಸಿ ಮನೆಗೆ ಸ್ಕೂಟ್ಟಿಯಲ್ಲಿ ಹೊಗುವಾಗ ಕಾರು ಗೆ ಡಿಕ್ಕಿ ಹೊಡೆದು ತ್ರಿವ ಗಾಯವಾದ ಕಾರಣ ಚಿಕೀಸ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಬೈಕಿನ ಹಿಂದೆ ಕುಳಿತಿದ್ದ ಮತ್ತೊಬ್ಬ ಯುವತಿಗೆ ಸಣ್ಣ ಪ್ರಮಾಣದ ಗಾಯ ವಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾಳೆ. ಅನುಷಾ ಕುಟುಂಬದ ಸದಸ್ಯರಿಗೆ ಭಗವಂತನು ದುಃಖ ಭರಿಸುವ ಶಕ್ತಿ ನೀಡಲಿ ಎಂದು ಮಲೆನಾಡು ಅಭಿವೃದ್ಧಿ ಪ್ರತಿಷ್ಠಾನದ ಅಧ್ಯಕ್ಷ ಹರನಾಥರಾವ್ ಸೇರಿದಂತೆ ಎಲ್ಲ ಸದಸ್ಯರು, ಪ್ರಾಂಶುಪಾಲರು, ಉಪನ್ಯಾಸಕರು ಶ್ರದ್ಧಾಂಜಲಿ ಸಲ್ಲಿಸಿದರು. ತಂದೆ ನಾಗರಾಜ್ ಸಾಗರದ ಕೆಎಸ್ ಆರ್ ಟಿಸಿ ಡಿಪೋದಲ್ಲಿ ಹವಾಲ್ದಾರ್ ಆಗಿ, ಕೆಲಸ ಮಾಡುತ್ತಿದ್ದಾರೆ



ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಮಂಗಳವಾರ 25 ಜೂನ್ 2024
TUESDAY 25 June 2024

# ವಿಧಾನ ಪರಿಷತ್ತಿನ ಒಂದು ಸ್ಥಾನಕ್ಕೆ ಚುನಾವಣೆ; ನಾಮಪತ್ರ ಸಲ್ಲಿಕೆ ಮಂಗಳವಾರದಿಂದ ಆರಂಭ



ಬೆಂಗಳೂರು: ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರ ರಾಜೀನಾಮೆಯಿಂದ ತರೆವಾಗಿರುವ ವಿಧಾನ ಪರಿಷತ್‌ನ ಒಂದು ಸದಸ್ಯ ಸ್ಥಾನಕ್ಕೆ ಉಪ ಚುನಾವಣೆ ಘೋಷಣೆಯಾಗಿದ್ದು, ಜೂ. 25 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ.

ನಾಮಪತ್ರ ಸಲ್ಲಿಕೆಗೆ ಜುಲೈ 2 ಕಡೆಯ ದಿನವಾಗಿದೆ. ನಾಮಪತ್ರಗಳ ಪರಿಶೀಲನೆ ಜುಲೈ 3ರಂದು ನಡೆಯಲಿದ್ದು, ನಾಮಪತ್ರ ವಾಪಸ್‌ಗೆ ಜುಲೈ 5ರವರೆಗೂ ಅವಕಾಶವಿದೆ. ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿ ಉಳಿದರೆ ಜುಲೈ 12ರಂದು ಬೆಳಗ್ಗೆ 9ರಿಂದ ಸಂಜೆ ನಾಲ್ಕು ಗಂಟೆವರೆಗೆ ಮತದಾನ ನಡೆಯಲಿದೆ. ಅಂದೇ ಸಂಜೆ 5ರ ನಂತರ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟಿಸಲಾಗುತ್ತದೆ.

ಜೂ.14,2028ರ ವರೆಗೆ ಅವಧಿ

ವಿಧಾನಸಭೆ ಸದಸ್ಯರಿಂದ ವಿಧಾನ ಪರಿಷತ್ತಿನ ಒಂದು ಸ್ಥಾನಕ್ಕೆ ಈ ಉಪ ಚುನಾವಣೆ ನಡೆಯಲಿದೆ. 2028ರ ಜೂ.14 ರವರೆಗೆ ಈ ಚುನಾವಣೆಯಲ್ಲಿ ಆಯ್ಕೆಯಾಗುವ ಸದಸ್ಯರ ಅವಧಿ ಇದೆ.

2023ರ ವಿಧಾನಸಭೆ ಚುನಾವಣೆಯಲ್ಲಿ ಟಿಕೆಟ್ ನೀಡಲಿಲ್ಲ ಎಂದು ಅಸಮಾಧಾನಗೊಂಡು ಜಗದೀಶ್ ಶೆಟ್ಟರ್ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದರು.

ಕಾಂಗ್ರೆಸ್‌ನಿಂದ ಸ್ಪರ್ಧಿಸಿದ್ದ ಅವರು ಪರಾಭವಗೊಂಡಿದ್ದರು. ಬಳಿಕ ವಿಧಾನಸಭೆಯ ಸದಸ್ಯರಿಂದ ವಿಧಾನ ಪರಿಷತ್ತಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಆಯ್ಕೆಯಾಗಿದ್ದರು.

ಈಗ ಮತ್ತೆ ಕಾಂಗ್ರೆಸ್ ತೊರೆದು ಬಿಜೆಪಿಗೆ ಮರಳಿ ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಶೆಟ್ಟರ್ ಚುನಾಯಿತರಾಗಿದ್ದಾರೆ.

ಬಸನಗೌಡ ಬಾದರ್ಲಿಗೆ ಕಾಂಗ್ರೆಸ್ ಟಿಕೆಟ್: ವಿಧಾನಸಭೆ ಸದಸ್ಯರ ಸಂಖ್ಯಾಬಲದ ಆಧಾರದ ಮೇಲೆ ಈ ಚುನಾವಣೆ ನಡೆಯುವುದರಿಂದ ಕಾಂಗ್ರೆಸ್ ಅಭ್ಯರ್ಥಿ ಅವಿರೋಧ ಆಯ್ಕೆಯಾಗುವ ಸಾಧ್ಯತೆ ಇದೆ. ಈ ಸ್ಥಾನಕ್ಕೆ ಕಾಂಗ್ರೆಸ್ ಬಸವನಗೌಡ ಬಾದರ್ಲಿ ಅವರಿಗೆ ಟಿಕೆಟ್ ?ಷಣೆ ಮಾಡಿದೆ. ಹಾಗಾಗಿ ಜೆಡಿಎಸ್ ಮತ್ತು ಬಿಜೆಪಿ ಈ ಉಪಚುನಾವಣೆಯಿಂದ ದೂರ ಉಳಿಯುವ ಸಾಧ್ಯತೆಗಳಿವೆ

## ಶ್ರೀ ಕರಿಯಣ್ಣ ಕೆಂಚಣ್ಣ ದೇವರ ಪುನಃ ಪ್ರತಿಷ್ಠಾಪನೆ



ಮಧುಗಿರಿ;-ತಾಲೂಕಿನ ಪುರವರ ಗ್ರಾಮದಲ್ಲಿ ಶತ ಶತಮಾನಗಳಿಂದಲೂ ನೆಲೆಸಿರುವ ಶ್ರೀ ಕರಿಯಣ್ಣ ಕೆಂಚಣ್ಣ ದೇವರ ಪುನಃ ಪ್ರತಿಷ್ಠಾಪನ ಕಾರ್ಯಕ್ರಮವನ್ನು ಶ್ರೀ ಲಕ್ಷ್ಮಿ ಮಧುಡಮ್ಮ ಹಾಗೂ ಬಿದಿರಮ್ಮ ದೇವಸ್ಥಾನದ ಸಮಿತಿ ವತಿಯಿಂದ ಅದ್ದೂರಿಯಾಗಿ ವಿಜೃಂಭಣೆಯಿಂದ ನೆರವೇರಿಸಲಾಯಿತು.

ದೇವರಿಗೆ ವಿಶೇಷ ಹೂವಿನ ಅಲಂಕಾರ ಪೂರ್ಣಕುಂಭ ಕಳಸ ಹೋಮ ಹವನ ಪೂಜಾ ವಿಧಿ ವಿಧಾನಗಳೊಂದಿಗೆ ಶ್ರೀ ಕರಿಯಣ್ಣ ಕೆಂಚಣ್ಣ ದೇವರ ಪುನಃ ಪ್ರತಿಷ್ಠಾಪನೆ ಮಾಡಲಾಯಿತು.

ದೇವರ ಪುನಃ ಪ್ರತಿಷ್ಠಾಪನೆಗೆ ಪುರವರ ಬುಡಕಟ್ಟಿನ ಹಾಲುಮತಸ್ಥರು ಅಣ್ಣ ತಮ್ಮಂದಿರು ಪುರವರ ಗ್ರಾಮಸ್ಥರು ಸುತ್ತಮುತ್ತಲಿನ ಗ್ರಾಮದವರು ಆಗಮಿಸಿ ದೇವರಿಗೆ ಪೂಜೆ ಸಲ್ಲಿಸಿ ದೇವರ ದರ್ಶನವನ್ನು ಪಡೆದರು.

## ಶ್ರದ್ಧೆಯಿಂದ ದೇವರ ಆರಾಧನೆ ಮಾಡುವುದು ಮೂಲ ಮಂತ್ರವಾಗಬೇಕು... ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ



ಶ್ರದ್ಧೆಯಿಂದ ದೇವರ ಆರಾಧನೆ ಮತ್ತು ಇತರರಿಗೆ ಉಪಕಾರ ಮಾಡುವುದು ಧರ್ಮಾಚರಣೆಯ ಮೂಲ ಮಂತ್ರವಾಗಿದೆ. ಇವುಗಳಿಂದ ಮನುಷ್ಯ ಜನ್ಮ ಸಾರ್ಥಕವಾಗಿಸಿಕೊಳ್ಳಲು ಸಾಧ್ಯ ಎಂದು ಶೃಂಗೇರಿ ಶಾರದಾಪೀಠದ ಶ್ರೀ ವಿಧುಶೇಖರ ಭಾರತೀ ಸ್ವಾಮೀಜಿ ಹೇಳಿದರು.

ಪಟ್ಟಣದ ಶಾರದಾಂಬಾ ದೇವಸ್ಥಾನದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಪುನರ್ ಅಷ್ಟಬಂಧ, ಕುಂಭಾಭಿಷೇಕ, ಸಹಸ್ರಮೋದಕ ಗಣಹವನ, ತತ್ವಕಲಾಭಿವೃದ್ಧಿ ಹೋಮ ಪೂರ್ಣಾಹುತಿಯಲ್ಲಿ ಪಾಲ್ಗೊಂಡ ಅವರು , ದೇವಸ್ಥಾನದ ಪ್ರಸಾದ ಕೊಠಡಿ, ಅರ್ಚಕರ ನಿವಾಸ, ಆಡಳಿತ ಕಚೇರಿ ಹಾಗೂ ಶಾರದಾಂಬಾ ವಾಣಿಜ್ಯ ಸಂಕೀರ್ಣ ಲೋಕಾರ್ಪಣೆ ಬಳಿಕ ನಡೆದ ಆಶೀರ್ವಚನದಲ್ಲಿ ಶ್ರೀಗಳು ಮಾತನಾಡಿದರು.

ನಾವು ಇನ್ನೊಬ್ಬರಿಗೆ ಉಪಕಾರ ಮಾಡದಿದ್ದರೂ ಚಿಂತೆಯಿಲ್ಲ, ತೊಂದರೆ ಮಾಡದಿರುವುದೇ ದೊಡ್ಡ ಉಪಕಾರವಾಗುತ್ತದೆ. ಐಕ್ಯಮತ್ಯ, ಧರ್ಮನಿಷ್ಟತೆ ಹೊಂದಿರುವ ಸಮಾಜವು ಅಭಿವೃದ್ಧಿಯ ಹಾದಿಯಲ್ಲಿ ನಡೆಯಲಿದೆ.

ಕುಟುಂಬದಲ್ಲಿ ನಿತ್ಯದ ಕರ್ಮಗಳ ಜತೆ ಧಾರ್ಮಿಕ ಆಚರಣೆಗೂ ಹೆಚ್ಚಿನ ಆದ್ಯತೆ ನೀಡಬೇಕು. ನಮ್ಮ ಸಂಸ್ಕೃತಿಯಲ್ಲಿ ಧರ್ಮಾಚರಣೆ ಬಗ್ಗೆ ವಿಶೇಷ ಒತ್ತು ನೀಡಲಾಗಿದ್ದು, ಆರಾಧನೆಗೆ ಹಲವು ವಿಧಾನಗಳಿವೆ. ಮನುಷ್ಯ ತನ್ನ ದೈನಂದಿನ ಕೆಲಸಗಳ ನಡುವೆಯೂ ದೇವರು, ಧರ್ಮಾಚರಣೆಗೆ ಸ್ವಲ್ಪಕಾಲ ಮೀಸಲಿಡಬೇಕು ಎಂದರು.

ಈ ಸಂದರ್ಭದಲ್ಲಿ ಶ್ರೀ ಶಾರದಾಂಬಾ ದೇವಸ್ಥಾನದ ಅಧ್ಯಕ್ಷ ಕೆ.ವಿ.ಜಯರಾಮ್ ಅಧ್ಯಕ್ಷತೆ ವಹಿಸಿದ್ದರು. ಶ್ರೀರಾಮ, ವಿಜಯಕುಮಾರ್, ಸುದೇವ, ಕೌಶಿಕ್ ಕುಮಾರ್, ಸಂತೋಷ್,ಪ್ರಮುಖರಾದ ವಿ.ಮಹೇಶ್, ಉಷಾ ಗುರುಮೂರ್ತಿ, ವಿ.ಶಂಕರ್, ವಿ.ಚಂದ್ರಶೇಖರ್, ರಾಘವೇಂದ್ರ, ಚಂದ್ರಶೇಖರ್ ಜಿ., ಕೃಷ್ಣಮೂರ್ತಿ ವಾಮನಾಚಾರ್ ಮೊದಲಾದವರು ಉಪಸ್ಥಿತರಿದ್ದರು.

## ನವ ಕರ್ನಾಟಕ ರಕ್ಷಣಾ ವೇದಿಕೆ ಕೆಜಿಎಫ್ ತಾಲ್ಲೂಕು ಅಧ್ಯಕ್ಷರಾಗಿ ಬಿ.ಮಲ್ಲಿಕಾರ್ಜುನ ಆಯ್ಕೆ



ಕೆಜಿಎಫ್: ನವ ಕರ್ನಾಟಕ ರಕ್ಷಣಾ ವೇದಿಕೆಯ ನೂತನ ತಾಲ್ಲೂಕು ಅಧ್ಯಕ್ಷರಾಗಿ ಬಿ.ಮಲ್ಲಿಕಾರ್ಜುನ ಅವರನ್ನು ರಾಜ್ಯ ಸಂಸ್ಥಾಪಕ ಅಧ್ಯಕ್ಷರಾದ ರಾಜಗೋಪಾಲ್ ಗೌಡ ಮತ್ತು ಕೋಲಾರ ಜಿಲ್ಲಾಧ್ಯಕ್ಷರಾದ ಕೆ.ಎಂ.ಕೃಷ್ಣಮೂರ್ತಿ ಅವರು ಆಯ್ಕೆಮಾಡಿ ಕನ್ನಡ ನಾಡ ನುಡಿ ಜಲ ರಕ್ಷಣೆಗೆ ನಿಂತು ಹೋರಾಡಿ ಸಂಘಟನೆಯನ್ನು ಮತ್ತಷ್ಟು ಮುನ್ನಡೆಸಬೇಕೆಂದು ಹೇಳಿದರು. ಬಿ.ಮಲ್ಲಿಕಾರ್ಜುನ ಅವರು ಮೂಲತಃ ರಾಯಚೂರಿನವರು ಕರ್ನಾಟಕ ಸಾರಿಗೆ ಸಂಸ್ಥೆಯಲ್ಲಿ ಸುಮಾರು ಇಪ್ಪತ್ತು ವರ್ಷಗಳ ಕಾಲ ತಮ್ಮ ಸೇವೆಯನ್ನು ಸಲ್ಲಿಸಿ ನಿವೃತ್ತಿಯನ್ನು ಪಡೆದು ಪ್ರಸ್ತುತ ಕೆಜಿಎಫ್ ನಗರದಲ್ಲಿ ವಾಸಮಾಡುತ್ತಿದ್ದು, ಇವರ ಕನ್ನಡದ ಆಸಕ್ತಿಯನ್ನು ಮತ್ತು ಚಟುವಟಿಗೆಗಳನ್ನು ಗುರುತಿಸಿ ನವ ಕರ್ನಾಟಕ ರಕ್ಷಣಾ ವೇದಿಕೆ ಕೆಜಿಎಫ್ ತಾಲ್ಲೂಕು ಘಟಕದ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಬಿ.ಮಲ್ಲಿಕಾರ್ಜುನ ಅವರು ಮಾತನಾಡಿ ನಾನು ಸಾರಿಗೆ ಸಂಸ್ಥೆಯಲ್ಲಿ ಸಲ್ಲಿಸಿರುವ ಸೇವೆಯನ್ನು ಮತ್ತು ನಾನು ಮಾಡುತ್ತಿದ್ದ ಕನ್ನಡದ ರಕ್ಷಣೆಯ ಕೆಲಸವನ್ನು ನೋಡಿ ತಾಲ್ಲೂಕು ಅಧ್ಯಕ್ಷರನ್ನಾಗಿ ನೇಮಕ ಮಾಡಿದಕ್ಕೆ ಜಿಲ್ಲಾ ಅಧ್ಯಕ್ಷರಾದ ಕೆ.ಎಂ.ಕೃಷ್ಣಮೂರ್ತಿ ಮತ್ತು ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ರಾಜಗೋಪಲ್ ಗೌಡ ಅವರನ್ನು ಕೆಜಿಎಫ್ ಕಚೇರಿಯಲ್ಲಿ ಅಭಿನಂದಿಸಿದರು.

ವರದಿ: ಗೋಪಾಲಕೃಷ್ಣ, ಕೋಲಾರ

## ಕಾಶ್ಮೀರವನ್ನು ಪೂರ್ಣವಾಗಿ ಭಾರತದಲ್ಲಿ ಸೇರಿಸಲು ಹೋರಾಡಿ

ತಿ.ನರಸೀಪುರ:- ಕಾಶ್ಮೀರವನ್ನು ಪೂರ್ಣವಾಗಿ ಭಾರತದಲ್ಲಿ ಸೇರಿಸಲು ಹೋರಾಡಿ, ಅದೇ ಹೋರಾಟಕ್ಕೆ ಪ್ರಾಣವನ್ನೇ ಅರ್ಪಿಸಿದ ಮೊದಲಿಗರು ಪೂಜ್ಯನೀಯ ಶ್ಯಾಮ ಪ್ರಸಾದ್ ಮುಖರ್ಜಿ ಎಂದು ಮಂಡಲ ಉಸ್ತುವಾರಿ ಮಂಗಳ ಸೋಮಶೇಖರ್ ನುಡಿದರು.

ಪಟ್ಟಣದ ವೀರಶೈವ ಲಿಂಗಾಯತ ವಿದ್ಯಾರ್ಥಿ ನಿಲಯದಲ್ಲಿ ವರುಣಾ ವಿಧಾನ ಸಭಾ ಬಿಜೆಪಿ ಮಂಡಲದ ವತಿಯಿಂದ ಹಮ್ಮಿಕೊಂಡಿದ್ದ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ರವರ ಸಂಸರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಂಗಳ ಸೋಮಶೇಖರ್ ಮಾತನಾಡಿದರು.

ಅವರು ಜನಸಂಘದ ಸ್ಥಾಪನೆಗೂ ಮುಂಚಿನ ಹೋರಾಟಗಳು, ದೃಢ ಸಂಕಲ್ಪಗಳು, ಯಾವುದೇ ಸಂದರ್ಭದಲ್ಲೂ ಅಲ್ಲಾಡದೆ ಅಚಲವಾಗಿ ನಿಂತ ಅವರ ಸಿದ್ಧಾಂತ, ರಾಷ್ಟ್ರೀಯತೆಯ ಪರವಾದ ಹೋರಾಟದಲ್ಲಿ ತಮ್ಮ ಪ್ರಾಣವನ್ನೂ? ಲೆಕ್ಕಿಸದ ಅವರ ಆ ಮನೋಸ್ಥೈರ್ಯ ಇಂದಿಗೂ ಪ್ರತಿಯೊಬ್ಬ ಭಾರತೀಯರಿಗೂ ದಾರಿ ದೀಪ ಎಂದರು. ನಮ್ಮದೇ ಆಗಿದ್ದರೂ, ನಮ್ಮದಾಗಿರದಿದ್ದ

ಕಾಶ್ಮೀರದಲ್ಲಿ ಇಂದು ತ್ರಿವರ್ಣ ಧ್ವಜ

ಸ್ವಚ್ಛಂದವಾಗಿ ಹಾರಾಡುತ್ತಿದೆಯೆಂದರೆ ಅದರ ಹಿಂದಿನ ಶಕ್ತಿ ಡಾ। ಶ್ಯಾಮ ಪ್ರಸಾದರು ಎಂದರೆ

"ವಿಭಜನಾಕಾರರ ನಿದ್ದೆಗೆಡಿಸಿದ್ದ ಮುಖರ್ಜಿ ಅವರು ಅದೇ ಹೋರಾಟದಲ್ಲೇ ಬಂಧನ ಕ್ಕೊಳಪಟ್ಟು ನಿಗೂಢವಾಗಿ ಮೃತಪಟ್ಟರು. ಅವರ ಆ ಬಲಿದಾನಕ್ಕೆ ಈಗ ಪ್ರತಿಫಲ ದೊರೆತು, ಸಮಗ್ರ ಭಾರತವೊಂದು ತಲೆ ಎತ್ತಿ ನಿಂತಿರುವ ಉತ್ಸಾಹದಲ್ಲಿದೆ"

ಮಂಡಲ ಉಸ್ತುವಾರಿ ಮಂಗಳ ಸೋಮಶೇಖರ್

"ಏಕ್ ದೇಶ್ ಮೆ ದೋ ವಿಧಾನ್, ದೋ ಪ್ರಧಾನ್ ಔರ್ ದೋ ನಿಶಾನ್ ನಹಿ ಚಲೇಂಗೆ ನಹಿ ಚಲೇಂಗೆ' ಎನ್ನುವ ಘೋಷಣೆಯ ಮೂಲಕ ಒಂದೇ ದೇಶದ ಎರಡು ಸಂವಿಧಾನ, ಎರಡು ಗುರಿ, ಎರಡು ಬಾವುಟಗಳನ್ನು ಗಟ್ಟಿ ದನಿಯಲ್ಲಿ ಡಾ.ಡಾ। ಶ್ಯಾಮ ಪ್ರಸಾದ್ ಮುಖರ್ಜಿ ವಿರೋಧಿಸಿದ ಧೀಮಂತ ದೇಶ ಪ್ರೇಮಿ"

ಮಂಡಲ ಅಧ್ಯಕ್ಷ ಸತೀಶ್

ಈ ಸಂದರ್ಭದಲ್ಲಿ ಮಂಡಲ ಉಸ್ತುವಾರಿ ಮಂಗಳ ಸೋಮ ಶೇಖರ್ ಮಂಡಲ ಅಧ್ಯಕ್ಷ ಸತೀಶ್, ಪ್ರಧಾನ ಕಾರ್ಯದರ್ಶಿ ವೆಂಕಟರಮಣ ಶೆಟ್ಟಿ, ಕುಮಾರ ಬಿದರಗೂಡು, ಸಿದ್ದರಾಜು, ಮಾಜಿ ಅಧ್ಯಕ್ಷ ಶಿವಯ್ಯ, ಶಿವು ಉಳಿಮಾವು,ಡಿ.ಎಲ್. ಮಹದೇವಪ್ಪ, ಪ್ರಭುಸ್ವಾಮಿ ಭೂಗಯ್ಯನಹುಂಡಿ,ತುಂಬಲ ಪ್ರಭುಸ್ವಾಮಿ, ಆಲಗೂಡು ಕೃಷ್ಣ, ಮಲ್ಲೇಶ,ಮಂಜು, ಮಹಿಳಾ ಮೋರ್ಚಾ ಅಧ್ಯಕ್ಷೆ ಲಕ್ಷ್ಮಿ, ರಾಜೇಶ್ವರಿ, ಅಹಲ್ಯಾ, ನಾಗರಾಜು,ರಂಗಚಾರಿ ಹುಂಡಿ ಶಂಕರ, ಆನಂದ ರಾಜು, ಕೀರ್ತಿ ಸೇರಿದಂತೆ ಮತ್ತಿತರರು ಹಾಜರಿದ್ದರು.



ಡಾ.ಶ್ಯಾಮ ಪ್ರಸಾದ್ ಮುಖರ್ಜಿ

ಎಂದೊಡನೆ ಬಹುತೇಕ ಜನ ಸಾಮಾನ್ಯರಿಗೆ ನೆನಪಾಗುವುದು ಅವರಿಂದ ಸ್ಥಾಪಿತವಾದ ಭಾರತೀಯ ಜನಸಂಘ ಎನ್ನುವ ಪಕ್ಷ ಮತ್ತು ಆ ಮೂಲಕ ಇದೀಗ ಪ್ರಪಂಚದ ಅತೀ ದೊಡ್ಡ ಮತ್ತು ಅತೀ ಹೆಚ್ಚು ಸದಸ್ಯರನ್ನು ಹೊಂದಿರುವ ರಾಜಕೀಯ ಪಕ್ಷವೆನ್ನುವ ಹೆಗ್ಗಳಿಕೆ ಹೊಂದಿರುವ ಭಾರತೀಯ ಜನತಾ ಪಕ್ಷ, ಆದರೆ ಡಾ। ಶ್ಯಾಮ ಪ್ರಸಾದ್ ಮುಖರ್ಜಿ ತಪ್ಪಾಗಲಾರದು ಏಕೆಂದರೆ ಸ್ವಾತಂತ್ರ್ಯ ನಂತರ ಜಮ್ಮು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡುವ ನಿಟ್ಟಿನಲ್ಲಿ ಕೇಂದ್ರ ಸರಕಾರದ ಜತೆ ಮಾತು ಕತೆಗಳು ಆರಂಭ ಗೊಂಡು,ರಾಷ್ಟ್ರ ಧ್ವಜದ ಜತೆಗೆ ಜಮ್ಮು- ಕಾಶ್ಮೀರದ ರಾಷ್ಟ್ರಧ್ವಜವನ್ನೂ ಸಮಾನಾಂತರವಾಗಿ ಹಾರಿಸಲು ಸಾರ್ವಭೌಮ ರಾಷ್ಟ್ರವಾದ ಭಾರತವು ಒಪ್ಪಿ?ಕೊಂಡಾಗ, ಭಾರತದೊಳಗಿನ ರಾಜ್ಯವೊಂದರಲ್ಲಿ ಭಾರತೀಯರಿಗೆ ಆಸ್ತಿ ಖರೀದಿಸಲು ನಿರ್ಬಂಧ ಹೇರಿದಾಗ, ಆ ರಾಜ್ಯಕ್ಕೆ ಸ್ವಾಯತ್ತೆ ನೀಡುವ ಕರಡು ಸಿದ್ಧವಾದಾಗ ಮೊದಲ ದೊಡ್ಡ ವಿರೋಧ ವ್ಯಕ್ತವಾಗಿದ್ದು ಡಾ। ಶ್ಯಾಮ ಪ್ರಸಾದ್ ಮುಖರ್ಜಿ ಅವರಿಂದ ಎಂದು ನೆನೆದರು.

ಭಾರತೀಯ ಸಂಸ್ಕೃತಿಯ ಆಧಾರದ ಮೇಲೆ ದೇಶವನ್ನು ಪುನರ್ ನಿರ್ಮಾಣ ಮಾಡುವ ಹಾಗೂ ಜಗತ್ತಿನಲ್ಲಿ ಭಾರತವನ್ನು ಪ್ರಬಲ ರಾಷ್ಟ್ರವನ್ನಾಗಿಸುವ ಗುರಿಯನ್ನು ಹೊಂದಿದ್ದ ಮುಖರ್ಜಿಯವರ ಆ ಕನಸುಗಳು ಇದೀಗ ಒಂದೊಂದಾಗಿ ನನಸಾಗುತ್ತಾ ಸಾಗುತ್ತಿವೆ. ಪಾಕ್ ಆಕ್ರಮಿತ ಕಾಶ್ಮೀರವನ್ನು ಪುನಃ ವಶಪಡಿಸಿಕೊಂಡು ಅದನ್ನು ಭಾರತದ ಭಾಗವನ್ನಾಗಿ ಘೋಷಿಸಬೇಕು ಎಂದು ನೆಹರೂ ಅವರನ್ನು ಒತ್ತಾಯಿಸಿದ್ದ ಮುಖರ್ಜಿಯವರು, ಒಂದು ವೇಳೆ ಭಾರತ ತನ್ನ ಪ್ರದೇಶವನ್ನು ವಶಪಡಿಸಿ ಕೊಳ್ಳಲು ವಿಫಲವಾದರೆ ಅದೊಂದು ರಾಷ್ಟ್ರೀಯ ಅವಮಾನ ಎಂದು ಹೇಳಿದ್ದರು ಎಂದರು.

## ಗುಂಡ್ಲುಪೇಟೆ ಅದ್ದೂರಿ ಬಸವ ಜಯಂತಿ ಕಾರ್ಯಕ್ರಮ



ಗುಂಡ್ಲುಪೇಟೆ: ತಾಲ್ಲೂಕಿನ ಎಲ್ಲಾ ವಿವಿದ ವೀರಶೈವ ಲಿಂಗಾಯತ ಸಂಘಟನೆಗಳ ವತಿಯಿಂದ ಬಸವ ಜಯಂತಿಯನ್ನ ಆಚರಿಸಲಾಯಿತು.

ಜೆ.ಎಸ್.ಎಸ್ ಕಾಲೇಜು ಮುಂಬಾಗದಲ್ಲಿ ಬೆಳಿಗ್ಗೆ ತಾಲ್ಲೂಕಿನ ಎಲ್ಲಾ ಮಠಾದೀಶರು ಬಸವಣ್ಣನ ಬಾವಚಿತ್ರಕ್ಕೆ ಪುಷ್ಪಾಂಜಲಿ ನೆರವೇರಿಸಿದರು.ನಂತರ ಮೆರವಣಿಗೆಗೆ ತಾಲ್ಲೂಕಿನ ಶಾಸಕರಾದ ಗಣೇಶ್ ಪ್ರಸಾದ್ ಹಾಗೂ ಮಾಜಿ ಶಾಸಕರಾದ ನಿರಂಜನ್ ಕುಮಾರ್ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ವೀರಗಾಸೆ. ಡೋಳ್ಳುಕುಣಿತ. ಭಜನಾ ತಂಡಗಳು. ಬೀಸುಕಂಸಾಳೆ.ನಂದಿಧ್ವಜ ಜೊತೆಗೆ ಡಿಜೆ.ಹಾಗೂ ಅಲಂಕರಿಸಿದ ಎತ್ತುಗಳು.ಸೂರ್ಯ ಬೆಳ್ಳಿ ರಥದಲ್ಲಿ ಬಸವಣ್ಣನವರ ಪ್ರತಿಮೆ ಇಟ್ಟಿದ್ದು ಮೆರವಣಿಗೆಯಲ್ಲಿ ಆಕರ್ಷಣೀಯವಾಗಿದ್ದವು

## ಖಾಸಗಿ ಫೈನಾನ್ಸ್ ಸಿಬ್ಬಂದಿ ಆತ್ಮಹತ್ಯೆ ಶರಣು



ಗುಂಡ್ಲುಪೇಟೆ: ಖಾಸಗಿ ಫೈನಾನ್ಸ್ ಸಿಬ್ಬಂದಿಯೋರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗುಂಡ್ಲುಪೇಟೆ ಟೌನನಲ್ಲಿ ನಡೆದಿದೆ. ನಂಜನಗೂಡು ತಾಲೂಕಿನ ನಾಗಣಾಪುರ ಗ್ರಾಮದ ಅಭಿಷೇಕ್(23) ಮೃತ ಯುವಕ. ಈತ ಖಾಸಗಿ ಫೈನಾನ್ಸ್ ವೊಂದರಲ್ಲಿ ಕೆಲಸ ಮಾಡುತ್ತಿದ್ದು, ಭಾನುವಾರ ಯಾರು ಇಲ್ಲದ ವೇಳೆ ರಾತ್ರಿ ಕಚೇರಿಯ ಕೊಠಡಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ ಎನ್ನಲಾಗುತ್ತಿದ್ದು, ಸಾವಿಗೆ ನಿಖರ ಕಾರಣ ತಿಳಿದುಬಂದಿಲ್ಲ. ನಂತರ ಮಾಹಿತಿ ಅರಿತ ಗುಂಡ್ಲುಪೇಟೆ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿ, ಮೃತದೇಹವನ್ನು ವಶಕ್ಕೆ ಪಡೆದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದ್ದಾರೆ ಈ ಬಗ್ಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 50 ಮೀಟರ್ ದೂರದಲ್ಲಿ ಶವ ಪತ್ತೆ....!!!



ಹೊಸನಗರ: ಇಲ್ಲಿನ ಯಡೂರು ಅಬ್ಬಿ ಫಾಲ್ಸ್ ನೋಡಲು ಬಂದ ಬಳ್ಳಾರಿ ಮೂಲಕ ಬೆಂಗಳೂರು ಪ್ರವಾಸಿಗನೋರ್ವ ನೀರುಪಾಲಾದ ಘಟನೆ ಭಾನುವಾರ ನಡೆದಿದ್ದು, ಇಂದು ಜಲಪಾತದಿಂದ ಸುಮಾರು 50 ಮೀಟರ್ ದೂರದಲ್ಲಿ ಶವ ಪತ್ತೆಯಾಗಿದೆ.

ಮೃತಪಟ್ಟ ಯುವಕನನ್ನು ಬಳ್ಳಾರಿ ನಿವಾಸಿ ವಿನೋದ್ (26) ಎಂದು ಗುರುತಿಸಲಾಗಿದ್ದು, ಈತ ಬೆಂಗಳೂರು ಬಸವನಗುಡಿಯ ಖಾಸಗಿ ಸಾಫ್ಟ್‌ವೇರ್ ಕಂಪೆನಿಯಲ್ಲಿ ಕೆಲಸ ಮಾಡುತ್ತಿದ್ದ. ಈತ 12 ಜನರ ತಂಡದೊಂದಿಗೆ ಆಗಮಿಸಿ, ಕೊಡಚಾದ್ರಿ ಚಾರಣ ಮುಗಿಸಿಕೊಂಡು, ಯಡೂರು ಸಮೀಪದ ಅಬ್ಬಿ ಜಲಪಾತ ನೋಡಲು ತೆರಳಿದ್ದರು. ಹೀಗೆ ಹೋದವರು ಭಾನುವಾರ ಮಧ್ಯಾಹ್ನ 3 ಗಂಟೆ ಸುಮಾರಿಗೆ ಜಲಪಾತದ ಎದುರು ಫೋಟೋ ಕ್ಲಿಕ್ಕಿಸಿಕೊಂಡ ನಂತರ ಕಾಲು ಜಾರಿ ಬಿದ್ದಿದ್ದು, ಹರಿಯುವ ನೀರಿನಲ್ಲಿ ಕೊಚ್ಚಿಕೊಂಡು ಹೋಗಿದ್ದಾನೆ.

ನಾಪತ್ತೆಯಾಗಿರುವ ವಿನೋದ್‌ಗಾಗಿ ನಗರ ಠಾಣೆ ಪೊಲೀಸರು ಮತ್ತು ಅಗ್ನಿಶಾಮಕ ದಳದವರು ಭಾನುವಾರ ರಾತ್ರಿಯವರೆಗೂ ಹುಡುಕಾಟ ನಡೆಸಿದ್ದರು. ಆದರೆ ಶವ ಪತ್ತೆಯಾಗದ ಕಾರಣ ಇಂದು ಬೆಳಿಗ್ಗೆ ಮುಳುಗು ತಜ್ಞರಾಗಿ ಖ್ಯಾತಿ ಪಡೆದಿರುವ ಈಶ್ವರ್ ಮಲ್ಪೆ ಅವರ ತಂಡ ಹಾಗೂ ಕೋಟ ಜೀವನ್ ಮಿತ್ರ ನಾಗರಾಜ್ ಪುತ್ರನ್ ಅವರನ್ನು ಘಟನಾ ಸ್ಥಳಕ್ಕೆ ಕರೆಸಲಾಗಿತ್ತು. ಇವರೊಂದಿಗೆ ಸ್ಥಳೀಯರು ಹಾಗೂ ಇಲಾಖೆಯವರು ಕಾರ್ಯಾಚರಣೆ ನಡೆಸಿ ಮೃತದೇಹವನ್ನು ಪತ್ತೆ ಹಚ್ಚಿದ್ದು, ಶವವನ್ನು ಮರಣೋತ್ತರ ಪರೀಕ್ಷೆಗೆ ಸಾಗಿಸಲಾಗಿದೆ. ಹೊಸನಗರ ತಾಲ್ಲೂಕು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವರದಿ: ತನುಜ್ ಕುಮಾರ್. ಹೊಸನಗರ....

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH